ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೮೪**

**ಪಟ್ಟಿ – ೦೨**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತನೆಯ ಅಧಿವೇಶನ

**ಬುಧವಾರ, ದಿನಾಂಕ : ೦೨ನೇ ಮಾರ್ಚ್, ೨೦೧೬**

---

## ಸಮೂಹ – III

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಸಣ್ಣ ಕೆರೆಗಳ ರಕ್ಷಣೆ ಹಾಗೂ ಅಭಿವೃದ್ಧಿ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭ (೦೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಣ್ಣ ಕೆರೆಗಳನ್ನು ರಕ್ಷಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಸಣ್ಣ ಕೆರೆಗಳನ್ನು ಉಳಿಸಲು ಹಾಗೂ ಅಭಿವೃದ್ಧಿಗೊಳಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಯಾಗಿರುವ ಹಣವನ್ನು ಫಲಾನುಭವಿಗಳಿಗೆ ಸಮರ್ಪಕವಾಗಿ ವಿತರಣೆ ಮಾಡದಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೭೮ (೨೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬರ ಪರಿಹಾರಕ್ಕಾಗಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಯಾದ ಹಣ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಆ ಪೈಕಿ ಫಲಾನುಭವಿಗಳಿಗೆ ವಿತರಿಸಲಾದ ಪರಿಹಾರದ ಮೊತ್ತವೆಷ್ಟು; (ವರ್ಷವಾರು ತಾಲ್ಲೂಕುವಾರು ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ಸಾಕಷ್ಟು ಹಣಕಾಸಿನ ಸಹಾಯವೊದಗಿಸಿದ್ದರೂ ಈ ಸಹಾಯವನ್ನು ಫಲಾನುಭವಿಗಳಿಗೆ ಸಮರ್ಪಕವಾಗಿ ವಿತರಣೆ ಮಾಡದಿರಲು ಕಾರಣವೇನು ;

(ಈ) ಈ ಅಸಮರ್ಪಕ ವಿತರಣೆ ಕಾರಣೀಕರ್ತರಾದವರನ್ನು ಗುರುತಿಸಿ, ಅವರ ಮೇಲೆ ಕ್ರಮ ಜರುಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಾಡಾನೆಗಳಿಂದ ಆದ ಬೆಳೆಹಾನಿ ಹಾಗೂ ಪ್ರಾಣಹಾನಿ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೭೯ (೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಆನೆಗಳ ತುಳಿತಕ್ಕೆ ಬಲಿಯಾದ ರೈತರ ಸಂಖ್ಯೆ ಎಷ್ಟು ;

(ಆ) ಈ ಅವಧಿಯಲ್ಲಿ ಆನೆಗಳಿಂದ ಆದ ಬೆಳೆ ಹಾನಿಗೆ ಕೊಡಲಾದ ಪರಿಹಾರದ ಮೊತ್ತವೆಷ್ಟು ;

(ಇ) ಇತ್ತೀಚೆಗೆ ಆನೆಗಳಿಂದ ಸಂಭವಿಸಿರುವ ಈ ತರಹದ ಅವಘಡಗಳನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಮುಂಜಾಗ್ರತಾ ಕ್ರಮಗಳೇನು ;

(ಈ) ಆನೆಗಳು ಕಾಡಿನಿಂದ ನಾಡಿಗೆ ಆಗಮಿಸಿ ತೊಂದರೆ ನೀಡದಂತೆ ಸರ್ಕಾರ ಕೈಗೊಂಡ ಮುಂಜಾಗ್ರತಾ ಕ್ರಮಗಳೇನು ?

## ಬಂಡೀಪುರ ರಾಷ್ಟ್ರೀಯ ಉದ್ಯಾನ ಮತ್ತು ವನ್ಯಜೀವಿ ವಲಯದ ವ್ಯಾಪ್ತಿಯ ಒತ್ತುವರಿ ಮಾಡಿ ವಾಣಿಜ್ಯ ಬೆಳೆ ಬೆಳೆಯುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೦ (೨೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಂಡೀಪುರ ರಾಷ್ಟ್ರೀಯ ಉದ್ಯಾನ ಮತ್ತು ವನ್ಯಜೀವಿ ವಲಯದ ವ್ಯಾಪ್ತಿಯಲ್ಲಿ ಸುಮಾರು ೧೦೦೦ ಎಕರೆಯಷ್ಟು ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿಕೊಂಡು ಕೆಲವರು ಕಲ್ಲಂಗಡಿ ಮತ್ತು ಮತ್ತಿತರ ವಾಣಿಜ್ಯ ಬೆಳೆ ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ವನ್ಯ ಜೀವಿ ಮಂಡಳಿ ಸದಸ್ಯರು ಹಾಗೂ ಪ್ರಧಾನ ವನ್ಯ ಸಂರಕ್ಷಣಾಧಿಕಾರಿಗಳು ದೂರು ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಇ) ಈ ಬೆಳೆಯನ್ನು ಬೆಳೆಯುವುದರೊಂದಿಗೆ ಬೆಳೆಯ ರಕ್ಷಣೆಗಾಗಿ ವಿದ್ಯುತ್ ತಂತಿಯನ್ನು ಅಳವಡಿಸಿಕೊಳ್ಳುವುದರೊಂದಿಗೆ ಅಲ್ಲಿ ಕೆಲಸ ಮಾಡುವ ಕೂಲಿಗಳ ವಾಸಕ್ಕೆ ಶೆಡ್ಡನ್ನು ನಿರ್ಮಿಸಿಕೊಂಡಿದ್ದರೂ ಸರ್ಕಾರ ಯಾವುದೇ ಕ್ರಮ ಜರುಗಿಸದಿರಲು ಕಾರಣಗಳೇನು ;

(ಈ) ಈ ನಿಟ್ಟಿನಲ್ಲಿ ಸರ್ಕಾರ ಏನು ಕಾರ್ಯಕ್ರಮ ಕೈಗೊಂಡಿದೆ ?

## ಜೆ.ಒ.ಸಿ. ಯಿಂದ ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ವಿಲೀನಗೊಂಡಿರುವ ನೌಕರರಿಗೆ ಖಾಯಂ ಪೂರ್ವ ಅವಧಿ ಘೋಷಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೧ (೩೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೃತ್ತಿಪರ ಕೋರ್ಸ್ (JOC) ನಿಂದ ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ವಿಲೀನಗೊಂಡಿರುವ ೧೭೫ ನೌಕರರು ೨ ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದು, ಈವರೆಗೂ ಇವರ ಸೇವಾ ಖಾಯಂಮಾತಿಯನ್ನು ಘೋಷಿಸದಿರಲು ಕಾರಣವೇನು ;

(ಆ) ಈ ನೌಕರರಲ್ಲಿ ಈಗಾಗಲೇ ಕೆಲವರು ನಿಧನ ಹಾಗೂ ನಿವೃತ್ತಿ ಹೊಂದಿದ್ದು ಇನ್ನೂ ನಿವೃತ್ತಿ ಅಂಚಿನನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ವಿಲೀನಗೊಂಡಿರುವ ನೌಕರರ ಸೇವಾ ಖಾಯಂಮಾತಿಯನ್ನು ಘೋಷಿಸಲಾಗುವುದು ?

## ಮಂಗಳೂರಿನ ಹೊಸ ಮಿನಿ ವಿಧಾನಸೌಧದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೨ (೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರಿನ ಹೊಸ ಮಿನಿ ವಿಧಾನಸೌಧಕ್ಕೆ ಸಹಾಯಕ ಕಮೀಷನರ್ ಹಾಗೂ ಸಬ್ ರಿಜಿಸ್ಟರ್ ಕಛೇರಿಗಳನ್ನು ಸ್ಥಳಾಂತರಗೊಳಸದೆ ಇರಲು ಕಾರಣವೇನು ;

(ಆ) ವೃದ್ಧರು ಮತ್ತು ಅಂಗವಿಕಲರಿಗೆ ಲಿಫ್ಟ್ ಇಲ್ಲದಿರುವುದರಿಂದ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಮಿನಿ ವಿಧಾನಸೌಧಕ್ಕೆ ಲಿಫ್ಟ್ ಅಳವಡಿಸಲು ಉದ್ದೇಶಿಸಲಾಗಿದೆಯೇ, ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಅಳವಡಿಸಲಾಗುವುದು ?

## ಬಂದರು/ಮೀನುಗಾರಿಕಾ ಜೆಟ್ಟಿ ಕಾಮಗಾರಿ ಅನುಷ್ಠಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩ (೪೭) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಬಂದರು/ಮೀನುಗಾರಿಕೆ ಜೆಟ್ಟಿ ನಿರ್ಮಾಣದ ಕಾಮಗಾರಿಗಳು ಯಾವುವು ; ಯೋಜನಾ ವೆಚ್ಚವೆಷ್ಟು ; (ವರ್ಷವಾರು, ಯೋಜನೆವಾರು ವಿವರ ಒದಗಿಸುವುದು)

(ಆ) ಸದರಿ ಯೋಜನೆಗಳ ಅನುಷ್ಠಾನದಲ್ಲಿನ ವಿಳಂಬಕ್ಕೆ ಕಾರಣಗಳೇನು ;

(ಇ) ಬಂದರು ಮತ್ತು ಮೀನುಗಾರಿಕಾ ಜೆಟ್ಟಿ, ಬ್ರೇಕ್ ವಾಟರ್ ಕಾಮಗಾರಿಗಳ ಅನುಷ್ಠಾನವನ್ನು ಸಮರ್ಪಕಗೊಳಿಸಿ ಪ್ರಗತಿಯ ವೇಗ ಹೆಚ್ಚಳಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕರಾವಳಿಯ ಮೀನುಗಾರರ ಹಿತ ಕಾಪಾಡಲು ಸರ್ಕಾರದ ಮುಂದಿನ ಯೋಜನೆಗಳೇನು ?

## ಪಚ್ಚೇರಿ ಕೃಷಿ ಸಬ್ಸಿಡಿ ಹಣ ಬಿಡುಗಡೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪ (೪೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆ ಮೀನುಗಾರಿಕೆ ಇಲಾಖೆಯಲ್ಲಿ ಪಚ್ಚೇರಿ ಕೃಷಿಗೋಸ್ಕರ ಸರ್ಕಾರದಿಂದ ಬಿಡುಗಡೆಯಾದ ಸಬ್ಸಿಡಿ ಹಣವನ್ನು ಮೀನುಗಾರಿಕಾ ಇಲಾಖೆಯಲ್ಲಿಯೇ ಬಾಕಿ ಇರಿಸಿಕೊಂಡಿರುವುದು ನಿಜವೇ ;

(ಆ) ಫಲಾನುಭವಿಗಳು ಸಬ್ಸಿಡಿ ಹಣಕ್ಕಾಗಿ ಕಾಯುತ್ತಿದ್ದರೂ ವಿನಾ ಕಾರಣ ಸಬ್ಸಿಡಿ ಬಿಡುಗಡೆ ಮಾಡದೇ ವಿಳಂಬ ನೀತಿ ಅನುಸರಿಸಲು ಕಾರಣವೇನು ;

(ಇ) ತಕ್ಷಣ ಪಚ್ಛೇರಿ ಕೃಷಿ ಸಬ್ಸಿಡಿ ಹಣವನ್ನು ಸಂಬಂಧಿತ ಫಲಾನುಭವಿಗಳಿಗೆ ಪಾವತಿಸುವ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ?

## ಜಮಖಂಡಿ ತಾಲ್ಲೂಕಿನ ಮಿನಿ ವಿಧಾನಸೌಧ ಕಾಮಗಾರಿಯಲ್ಲಿ ವಿಳಂಬ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫ (೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಮಿನಿ ವಿಧಾನಸೌಧದ ಕಾಮಗಾರಿಯ ಯೋಜನಾ ವೆಚ್ಚವೆಷ್ಟು ;

(ಆ) ಸದರಿ ಮಿನಿ ವಿಧಾನಸೌಧದ ಕಾಮಗಾರಿ ಪೂರ್ಣಗೊಂಡಿದೆಯೇ, ಪೂರ್ಣಗೊಂಡಿದ್ದಲ್ಲಿ ಯಾವಾಗ ;

(ಇ) ಮಿನಿ ವಿಧಾನಸೌಧಕ್ಕೆ ಸರ್ಕಾರಿ ಇಲಾಖೆಗಳ ಕಛೇರಿಗಳನ್ನು ವರ್ಗಾಯಿಸಿ ಅಧಿಕೃತವಾಗಿ ಕಾರ್ಯನಿರ್ವಹಿಸಲು ಇರುವ ಅಡತಡೆಗಳೇನು ;

(ಈ) ಸದರಿ ಮಿನಿ ವಿಧಾನಸೌಧವು ಲೋಕಾರ್ಪಣೆಗೊಂಡು ಕಟ್ಟಡದಲ್ಲಿ ಸರ್ಕಾರಿ ಕಛೇರಿಗಳು ಕಾರ್ಯಾರಂಭ ಮಾಡಿದ್ದಲ್ಲಿ ಜನ ಸಾಮಾನ್ಯರಿಗೆ ಅನುಕೂಲವಾಗುತ್ತದೆ ಎಂದು ಸರ್ಕಾರಕ್ಕೆ ಮನವರಿಕೆಯಾಗಿಲ್ಲವೇ ;

(ಉ) ನೂತನ ಮಿನಿ ವಿಧಾನಸೌಧದ ಕಾಮಗಾರಿಗಳನ್ನು ಸಂಪೂರ್ಣಗೊಳಿಸಿ ಯಾವಾಗ ಲೋಕಾರ್ಪಣೆಗೊಳಿಸಲಾಗುವುದು ಮತ್ತು ಎಂದಿನಿಂದ ಸರ್ಕಾರಿ ಕಛೇರಿಗಳನ್ನು ಪ್ರಾರಂಭಿಸಲಾಗುವುದು ?

## ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತದ ಬಳಕೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬ (೫೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಸ್ಥಳೀಯ ಸಂಸ್ಥೆಗಳಿಂದ ವಸೂಲಾದ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವೆಷ್ಟು ; (ವರ್ಷಾವಾರು ವಿವರ ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಕಾರ್ಮಿಕ ಕಲ್ಯಾಣ ಕಾರ್ಯಕ್ರಮಗಳಿಗೆ ಖರ್ಚಾದ ಮೊತ್ತವೆಷ್ಟು ; (ವರ್ಷಾವಾರು ವಿವರ ಒದಗಿಸುವುದು)

(ಇ) ಗ್ರಾಮ ಪಂಚಾಯತ್ ಸೇರಿದಂತೆ ಸ್ಥಳೀಯ ಸಂಸ್ಥೆಗಳಿಂದ ವಸೂಲಿ ಮಾಡಿದ ಅಪಾರ ಮೊತ್ತದ ನಿಧಿಯನ್ನು ಖರ್ಚು ಮಾಡದೇ ಇರುವ ಅಧಿಕಾರಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಖರ್ಚಾಗದೇ ಇರುವ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವನ್ನು ಗ್ರಾಮ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಕಾರ್ಮಿಕ ಕಲ್ಯಾಣ ಯೋಜನೆ ಅನುಷ್ಠಾನ ಮಾಡುವ ಬಗ್ಗೆ ಸರ್ಕಾರದ ನಿಲುವೇನು ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಯ ಯೋಜನೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೭ (೫೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮೀನುಗಾರರ ವಸತಿ ಸೌಕರ್ಯ ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು ; (ಮಾಹಿತಿ ಒದಗಿಸುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ ಹಾಗೂ ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಮೀನು ಸಾಕಾಣಿಕೆ ಮಾಡಲಾಗುತ್ತಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

# ಚಿಕ್ಕಮಗಳೂರು ಜಿಲ್ಲೆಯ ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೮ (೫೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಎಷ್ಟು ; (ವಿಧಾನಸಭಾ ಕ್ಷೇತ್ರವಾರು ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಖರ್ಚಾಗಿರುವ ಹಣ ಎಷ್ಟು ; ಉಳಿಕೆಯಾದ ಮೊತ್ತ ಎಷ್ಟು ; (ಕಾಮಗಾರಿವಾರು, ವರ್ಷಾವಾರು ಮಾಹಿತಿ ನೀಡುವುದು)

(ಈ) ಮುಕ್ತಾಯಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು ; ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು ; ಇದಕ್ಕೆ ರೂಪಿಸಲಾಗಿರುವ ರೂಪರೇಷೆಗಳು ಯಾವುವು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಜಮ್ಮಾ ಬಾಣೆಗೆ ಕಂದಾಯ ವಿಧಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೯ (೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಜಮ್ಮಾ ಬಾಣೆಗೆ ಸಂಬಂಧಿಸಿದಂತೆ ೨೦೧೩ರಲ್ಲಿ ಕಂದಾಯ ವಿಧಿಸಲು ಅನುಕೂಲವಾಗುವಂತೆ ಕಾಯ್ದೆ ರೂಪಿಸಿದ್ದು ನಿಜವೇ ;

(ಆ) ಹಾಗಿದ್ದಲ್ಲಿ, ಎಷ್ಟು ಎಕರೆ ಜಾಗಕ್ಕೆ ಕಂದಾಯ ವಿಧಿಸಲಾಗಿದೆ ; ಎಷ್ಟು ಕಂದಾಯ ವಸೂಲಾಗಿದೆ ; (ವಿವರವನ್ನು ಗ್ರಾಮ ಪಂಚಾಯ್ತಿತಿವಾರು ಒದಗಿಸುವುದು)

(ಇ) ಕಂದಾಯ ವಿಧಿಸದೇ ಇದ್ದಲ್ಲಿ ಕಾರಣಗಳೇನು ; ಕಂದಾಯ ವಿಧಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಅರಣ್ಯ ಹಕ್ಕು ಕಾಯ್ದೆ ೨೦೦೫ ಪ್ರಕಾರ ಹಕ್ಕು ಪತ್ರ ನೀಡಲು ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦ (೫೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಕ್ಷಿತ ಅರಣ್ಯ ಮೀಸಲು ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಹಾಗೂ ಇತರೆ ಸಮುದಾಯದ ಜನರಿಗೆ ಅರಣ್ಯ ಹಕ್ಕು ಕಾಯ್ದೆ ೨೦೦೫ರ ಪ್ರಕಾರ ಹಕ್ಕು ಪತ್ರ ನೀಡಲು ಆದೇಶವಾಗಿರುವುದರ ಬಗ್ಗೆ ಕೈಗೊಂಡಿರುವ ಕ್ರಮವೇನು ;

(ಆ) ಈ ಸಂಬಂಧ ಹಕ್ಕುಪತ್ರಕ್ಕಾಗಿ ಕೊಡಗು ಜಿಲ್ಲೆಯಲ್ಲಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; ಎಷ್ಟು ಜನರಿಗೆ ಹಕ್ಕು ಪತ್ರ ವಿತರಿಸಲಾಗಿದೆ ; ಇದರಲ್ಲಿ ಪರಿಶಿಷ್ಟ ಪಂಗಡದವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮತ್ತು ಪಂಚಾಯಿತಿವಾರು ವಿವರ ನೀಡುವುದು)

(ಇ) ಅರ್ಜಿ ಪಡೆದು ಹಕ್ಕುಪತ್ರ ನೀಡದೆ ಇರುವ ಪ್ರಕರಣಗಳೇಷ್ಟು ; ನೀಡದೇ ಇರಲು ಕಾರಣಗಳೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಭೂಮಿಯ ವಿವರದ ಕುರಿತು

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧ (೫೭) ಮಾನ್ಯ ಕಂದಾಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಭೂಮಿ ಎಷ್ಟು ? (ತಾಲ್ಲೂಕುವಾರು, ಸ್ಮಶಾನ ಹಾಗೂ ಗೋಮಾಳ ಜಮೀನಿನ ವಿವರ ನೀಡುವುದು)

## ಸಾಮಾಜಿಕ ಭದ್ರತೆ ಯೋಜನೆಯಡಿ ನೀಡಲಾಗುತ್ತಿರುವ ಮಾಸಾಶನಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೨ (೨೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾಮಾಜಿಕ ಭದ್ರತಾ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ವಿವಿಧ ವರ್ಗಗಳ ಮಾಸಾಶನಗಳು ಯಾವುವು ; (ಜಿಲ್ಲಾವಾರು ಒಟ್ಟು ಅಂಕಿ ಸಂಖ್ಯೆಗಳ ವಿವರ ನೀಡುವುದು) ಆ

ಪೈಕಿ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ನೀಡಲಾಗಿರುವ ಮಾಸಾಶನಗಳು ಯಾವುವು ;

(ಆ) ಹಾವೇರಿ ಜಿಲ್ಲೆಯಲ್ಲಿ ಮಾಸಾಶನ ಮಂಜೂರಾತಿಗೆ ಸಲ್ಲಿಕೆಯಾಗಿರುವ ಅರ್ಜಿಗಳು ಮತ್ತು ಇತ್ಯರ್ಥಕ್ಕಾಗಿ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸರ್ಕಾರದ ನಿಯಮಗಳಡಿಯಲ್ಲಿ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಿದ ನಂತರ ಕನಿಷ್ಟ ಕಾಲಾವಧಿಯಲ್ಲಿ ಮಾಸಾಶನ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ತ್ವರಿತ ಕ್ರಮಗಳೇನು ?

## ತಾಲ್ಲೂಕಿಗೊಂದು ಹಸಿರು ಶಾಲಾವನ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೩ (೨೧೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆ ವತಿಯಿಂದ ತಾಲ್ಲೂಕಿಗೊಂದು ಹಸಿರು ಶಾಲಾವನ ಎಂಬ ಯೋಜನೆಯು ಜಾರಿಯಾಗಿದೆಯೇ ; ಆಗಿದ್ದಲ್ಲಿ, ರಾಜ್ಯದ ಯಾವ ತಾಲ್ಲೂಕುಗಳನ್ನು ಆಯ್ಕೆ ಮಾಡಲಾಗಿದೆ ಮತ್ತು ಯಾವ ಯಾವ ಶಾಲೆಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ ;

(ಆ) ಹಾವೇರಿ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳನ್ನು ಆಯ್ಕೆ ಮಾಡಲಾಗಿದೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾವೇರಿ ಜಿಲ್ಲೆಗೆ ಈ ಯೋಜನೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಮಾಡದಿದ್ದಲ್ಲಿ ಕಾರಣಗಳೇನು ?

## ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೪ (೨೧೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗಳಿಗೆ ನೀಡಿರುವ ಅನುದಾನವೆಷ್ಟು ; (ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಸ್ತುತ ಕಾಮಗಾರಿಗಳು ಯಾವ ಹಂತದಲ್ಲಿವೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ರೈತರಿಗೆ ಮೀನುಗಾರಿಕೆ ಕೃಷಿ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೫ (೨೧೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ರೈತರು ಮೀನುಗಾರಿಕೆ ಕೃಷಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಯೋಜನಾವಾರು/ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮೀನುಗಾರಿಕೆ ಅಭಿವೃದ್ಧಿಗೆ ಸರ್ಕಾರವು ಹಾವೇರಿ ಜಿಲ್ಲೆಯ ಪ್ರತಿ ತಾಲ್ಲೂಕಿಗೆ ನೀಡಿರುವ ಅನುದಾನವೆಷ್ಟು ; (ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾವೇರಿ ಜಿಲ್ಲೆಯಲ್ಲಿರುವ ಮೀನುಗಾರಿಕೆ ಕಛೇರಿಗಳೆಷ್ಟು, ಅವುಗಳಲ್ಲಿ ಸ್ವಂತ ಕಟ್ಟಡಗಳೆಷ್ಟು, ಬಾಡಿಗೆ ಕಟ್ಟಡಗಳೆಷ್ಟು ; ಅವುಗಳು ಎಲ್ಲಿವೆ ; (ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾವೇರಿ ಜಿಲ್ಲೆಯಲ್ಲಿ ಈ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳೆಷ್ಟು ಹಾಗೂ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳೆಷ್ಟು, ಖಾಲಿ ಇರುವ ಹುದ್ದೆಗಳೆಷ್ಟು ? (ಮಾಹಿತಿ ನೀಡುವುದು)

## ಅನುಕಂಪದ ನೇಮಕಾತಿಯಲ್ಲಿ ವಿಳಂಬ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೬ (ಲಳ) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅರಣ್ಯ ಕೈಗಾರಿಕಾ ನಿಗಮದಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಎಷ್ಟು ಅಭ್ಯರ್ಥಿಗಳ ಅರ್ಜಿಗಳನ್ನು ಸೌಕರಿಸಲಾಗಿದೆ ; (ಅರ್ಜಿದಾರರ ಹೆಸರು ಅರ್ಜಿ ಸಲ್ಲಿಕೆ ದಿನಾಂಕ ಸಹಿತ ವಿವರ ಒದಗಿಸುವುದು)

(ಆ) ಇವರುಗಳಿಗೆ ಉದ್ಯೋಗ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಯಾವ ಹಂತದಲ್ಲಿದೆ ;

(ಇ) ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅನುಮೋದನೆಗೆ ಯಾವಾಗ ರವಾನಿಸಲಾಗಿದೆ ; ಸದರಿ ಕಡತ ಈಗ ಯಾವ ಹಂತದಲ್ಲಿದೆ ; (ಕಡತ ಸಂಖ್ಯೆ ಸಮೇತ ವಿವರ ಒದಗಿಸುವುದು)

(ಈ) ಅರ್ಜಿ ಸಲ್ಲಿಸಿ ೧೦–೧೫ ವರ್ಷ ಕಳೆದರೂ ಅನುಕಂಪದ ನೇಮಕಾತಿ ವಿಳಂಬವಾಗುತ್ತಿರಲು ಕಾರಣವೇನು ; ಇದಕ್ಕೆ ನೇರ ಹೊಣೆ ಯಾರು ; ಎಷ್ಟು ದಿನದಲ್ಲಿ ಇವರುಗಳಿಗೆ ಉದ್ಯೋಗ ಒದಗಿಸಲಾಗುವುದು ?

## ಬಡನೇಕಾರರಿಗೆ ಸುವರ್ಣವಸ್ತ್ರ ನೀತಿಯ ಸೌಲಭ್ಯಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೯೭ (೮೬) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುವರ್ಣ ವಸ್ತ್ರ ನೀತಿಯುಲ್ಲಿ ಅಳವಡಿಸಿರುವ ಕಾರ್ಯಕ್ರಮಗಳಾವುವು ;

(ಆ) ಬಡನೇಕಾರರಿಗೆ ಸುವರ್ಣ ವಸ್ತ್ರ ನೀತಿಯಲ್ಲಿ ಯಾವ ಯೋಜನೆಗಳನ್ನು ರೂಪಿಸಲಾಗಿದೆ ;

(ಇ) ಕಳೆದ ೨ ವರ್ಷದ ಆಯವ್ಯಯದಲ್ಲಿ ನೇಕಾರರಿಗೆ ಯಾವ ಯಾವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ (ಜಿಲ್ಲಾವಾರು, ಯೋಜನಾವಾರು ಮೊತ್ತ ಅಂಕಿ–ಸಂಖ್ಯೆ ವಿವರ ಕೊಡುವುದು)

(ಈ) ಈ ಯೋಜನೆಗಳಿಗೆ ಮೀಸಲಿಟ್ಟ ಹಣ ಪೂರ್ಣ ಪ್ರಮಾಣದಲ್ಲಿ ಖರ್ಚಾಗಿದೆಯೇ ?

## ಸಬ್ಸಿಡಿಯಲ್ಲಿ ನೀಡುತ್ತಿರುವ ಮಗ್ಗಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೯೮ (೮೭) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷದ ಆಯವ್ಯಯದಲ್ಲಿ ಬಡ ನೇಕಾರರಿಗೆ ಎಷ್ಟು ವಿದ್ಯುತ್ ಮಗ್ಗಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ನೇಕಾರರ ವಿಳಾಸ ಸಮೇತ ವಿವರವಾದ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಸರ್ಕಾರದ ಯೋಜನೆಯಲ್ಲಿ ತೆಗೆದುಕೊಂಡಿರುವ ಮಗ್ಗಗಳನ್ನು ಹಾಕಲು ಸ್ಥಳೀಯವಾಗಿ ಪರವಾನಗಿ ಸಿಗದೆ ನೇಕಾರರು ತೊಂದರೆಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರ ನೇಕಾರರಿಗೆ ಯಾವ ರೀತಿ ಅನುಕೂಲ ಮಾಡಿಕೊಡಲಾಗುವುದು ?

## ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೯೯ (೧೫೯) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಇತ್ತೀಚಿನ ಪರಿಸ್ಥಿತಿ ಏನು ;

(ಆ) ನಿಗಮದಲ್ಲಿ ನೇಕಾರರಿಗೆ ಸರಿಯಾಗಿ ಪರಿವರ್ತನಾ ದರ ನೀಡದಿರಲು ಕಾರಣಗಳೇನು ; ನೀಡಲಾಗುವುದು ಯಾವಾಗ ;

(ಇ) ನೇಕಾರರಿಗೆ ಸರಿಯಾಗಿ ಭೀಮ ನೂಲು ಸರಬರಾಜು ಮಾಡದಿರಲು ಕಾರಣವೇನು ;

(ಈ) ಹಾಲಿ ನೇಕಾರರ ಸಂಖ್ಯೆ ಎಷ್ಟು ; ನಿಗಮದಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು ?

## ಬೆಂಗಳೂರು ಜನತೆ ಚಿರತೆಯ ಹಾವಳಿಗೆ ಬೆದರಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೦೦ (೧೬೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚಿನ ದಿನಗಳಲ್ಲಿ ಬೆಂಗಳೂರು ಸುತ್ತ ಮುತ್ತ ಚಿರತೆ ಹಾವಳಿ ಜಾಸ್ತಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಚಿರತೆಯನ್ನು ಹಿಡಿಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಭಯಭೀತರಾಗಿರುವ ಬೆಂಗಳೂರು ಜನತೆಗೆ ಸರ್ಕಾರದ ಭರವಸೆಗಳೇನು ;

(ಈ) ಸರಿಯಾದ ಕ್ರಮ ಜರುಗಿಸಿ ಜನರಿಗೆ ರಕ್ಷಣೆ ನೀಡಲಾಗುವುದೇ ?

## ರಾಜ್ಯದಲ್ಲಿ ಹೊಸ ತಾಲ್ಲೂಕುಗಳ ರಚನೆಯ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೧ (೧೫೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದಿನ ಸರ್ಕಾರದ ಜನಪ್ರಿಯ ಯೋಜನೆಗಳಲ್ಲಿ ಒಂದಾದ ಹೊಸ ತಾಲ್ಲೂಕುಗಳ ರಚನೆಯ ಯೋಜನೆಯ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವಾಗ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತದೆ ;

(ಆ) ಹೊಸ ತಾಲ್ಲೂಕುಗಳ ರಚನೆಗೆ ಯಾವಾಗ ಪ್ರದೇಶಗಳನ್ನು ಗುರುತಿಸಲಾಗಿದೆ ; ಗುರುತಿಸಿರುವ ಪಟ್ಟಣದ (ಹೆಸರು ಮತ್ತು ಜಿಲ್ಲಾವಾರು ವಿವರ ನೀಡುವುದು) ಹಾಗೂ ಈ ಯೋಜನೆಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು ; ಮತ್ತು ಪ್ರತಿ ತಾಲ್ಲೂಕು ರಚನೆಗೆ ಅವಶ್ಯವಿರುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಇ) ಈ ಯೋಜನೆಯನ್ನು ಜಾರಿಗೊಳಿಸಲು ಪ್ರಸ್ತಾಪಿಸುತ್ತಿದ್ದರೂ ಜಾರಿಗೊಳಿಸದಿರಲು ಕಾರಣವೇನು ; ಯೋಜನೆ ಜಾರಿಗೆ ತರಲು ಸರ್ಕಾರದಲ್ಲಿ ಸಾಕಷ್ಟು ಬಂಡವಾಳದ ಕೊರತೆಯಿದೆ ಎಂಬ ಸಾರ್ವಜನಿಕರ ಊಹೆ ಸರಿಯಾಗಿದೆಯೇ ; ಈಗಿನ ಈ ವಿಳಂಬ ದೋರಣೆಗೆ ಕಾರಣವೇನು ;

(ಈ) ಹೊಸ ತಾಲ್ಲೂಕುಗಳ ರಚನೆಗೆ ಸರ್ಕಾರದಲ್ಲಿ ಅನುದಾನದ ಕೊರತೆಯಿಲ್ಲದಿದ್ದಲ್ಲಿ ವಿಳಂಬ ಧೋರಣೆಗೆ ಕಾರಣವೇನು ಹೊಸ ತಾಲ್ಲೂಕುಗಳ ರಚನೆಯ ದಿನಾಂಕವನ್ನು ಪ್ರಕಟಿಸಲು ಇರುವ ತೊಂದರೆಗಳೇನು ?

## ಬಾಲ ಕಾರ್ಮಿಕರ ನಿರ್ಮೂಲನೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):–**

೧೦೨ (೧೬೨) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಇತರೆ ಪ್ರದೇಶಗಳಿಗಿಂತ ಬೆಂಗಳೂರು ನಗರದಲ್ಲಿ ಬಾಲಕಾರ್ಮಿಕರ ಸಂಖ್ಯೆ ಹೆಚ್ಚಾಗಿರುವುದು ನಿಜವೇ ; ಈ ಸಂಬಂಧ ಬೆಂಗಳೂರು ನಗರ ಜಿಲ್ಲೆಯು ಎಷ್ಟನೇ ಸ್ಥಾನದಲ್ಲಿದೆ ;

(ಆ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬಾಲ ಕಾರ್ಮಿಕ ನಿರ್ಮೂಲನೆಗಾಗಿ ರಾಷ್ಟ್ರೀಯ ಬಾಲ ಕಾರ್ಮಿಕ ಯೋಜನೆಯನ್ನು (N.C.L.P) ಹೊರತುಪಡಿಸಿದರೆ, ರಾಜ್ಯ ಸರ್ಕಾರದಿಂದ S.C.L.P (ಸ್ಟೇಟ್ ಚೈಲ್ಡ್ ಲೇಬರ್ ಪ್ರಾಜೆಕ್ಟ್) ಯೋಜನೆಯ ಅನುಷ್ಠಾನ ಒಂದೂ ಆಗದಿರುವುದು ನಿಜವೇ ;

(ಇ) ರಾಜ್ಯ ಸರ್ಕಾರದ ಈ ಯೋಜನೆ ಬೆಂಗಳೂರು ನಗರ ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳಲು ವಿಫಲವಾಗಲು ಕಾರಣವೇನು ; ಬೆಂಗಳೂರು ನಗರದಲ್ಲಿ ಇದನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಅಣೆಕಟ್ಟುಗಳಲ್ಲಿರುವ ನೀರಿನ ಪ್ರಮಾಣ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):–**

೧೦೩ (೧೬೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯದಲ್ಲಿರುವ ಅಣೆಕಟ್ಟೆಗಳಲ್ಲಿ ಇರುವ ನೀರಿನ ಪ್ರಮಾಣ ಎಷ್ಟು ; ಮುಂದೆ ಬೇಸಿಗೆಯನ್ನು ಎದುರಿಸಲು ಅಣೆಕಟ್ಟೆಗಳಲ್ಲಿ ಎಷ್ಟು ಪ್ರಮಾಣದ ನೀರಿನ ಕೊರತೆಯಿದೆ ;

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಬೇಸಿಗೆಗೆ ಕುಡಿಯುವ ನೀರಿನ ಕೊರತೆ ಎದುರಾಗಲಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕುಡಿಯುವ ನೀರಿನ ಕೊರತೆಯನ್ನು ನೀಗಿಸಲು ಸರ್ಕಾರವು ಯಾವ ರೀತಿಯ ಕ್ರಮಕ್ಕೆ ಮುಂದಾಗುವುದು, ಈ ನಿಟ್ಟಿನಲ್ಲಿ ಹಮ್ಮಿಕೊಂಡಿರುವ ಯೋಜನೆಗಳಾವುವು ; (ವಿವರ ಒದಗಿಸುವುದು)

(ಈ) ಈ ಯೋಜನೆಗಳಿಗೆ ಮೀಸಲಿಟ್ಟ ಹಣ ಪೂರ್ಣ ಖರ್ಚಾಗಿದೆಯೇ ?

## ಭದ್ರಾ ಜಲಾಶಯದಿಂದ ಕಾಲುವೆ ವ್ಯವಸ್ಥೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):–**

೧೦೪ (೧೬೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ಚಿತ್ರದುರ್ಗ ಮೊದಲಾದ ಜಿಲ್ಲೆಗಳ ಜನರಿಗೆ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಭದ್ರಾ ಜಲಾಶಯದಿಂದ ಕಾಲುವೆ ವ್ಯವಸ್ಥೆ ಮಾಡಲು ಸರ್ಕಾರವು ಮುಂದಾಗಿರುವುದು ನಿಜವೇ ;

(ಆ) ಭದ್ರಾ ಕಾಮಗಾರಿಗೆ ಅಗತ್ಯವಿರುವ ಜಮೀನನ್ನು ೫ ವರ್ಷಗಳ ಹಿಂದೆಯೇ ರೈತರಿಂದ ವಶಪಡಿಸಿಕೊಂಡಿರುವುದು ನಿಜವೇ ; ಒಟ್ಟು ಎಷ್ಟು ರೈತರಿಂದ ಎಷ್ಟು ಎಕರೆ ಜಮೀನನ್ನು ಯಾವಾಗ ವಶಪಡಿಸಿಕೊಳ್ಳಲಾಗಿದೆ ;

(ಇ) ಈ ಸಂಬಂಧ ರೈತರಿಗೆ ನೀಡಬೇಕಾದ ಪರಿಹಾರದ ಹಣವೆಷ್ಟು ? (ವಿವರ ನೀಡುವುದು)

## ಅಸಂಘಟಿತ ಕಾರ್ಮಿಕರಿಗೆ ಗುರುತಿನ ಚೀಟಿ ವಿತರಿಸುವ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):–**

೧೦೬ (೧೬೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು ; ಈಗಾಗಲೇ ಎಷ್ಟು ಜನ ಅಸಂಘಟಿತ ಕಾರ್ಮಿಕರಿಗೆ ಗುರುತಿನ ಚೀಟಿ ನೀಡಲಾಗಿದೆ ;

(ಆ) ಸದರಿ ಗುರುತಿನ ಚೀಟಿ ಪಡೆಯುವುದರಿಂದ ಅವರುಗಳಿಗೆ ಆಗುವ ಪ್ರಯೋಜನಗಳೇನು ;

(ಇ) ಗುರುತಿನ ಚೀಟಿಯನ್ನು ಯಾವಾಗ ಬೇಕಾದರೂ ಪಡೆಯುವಂತೆ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು ; ಇಲ್ಲವಾದಲ್ಲಿ ಆ ರೀತಿಯ ಸೌಲಭ್ಯ ನೀಡಬಹುದೆ ;

(ಈ) ಯಾವ ಯಾವ ಕಛೇರಿಗಳಲ್ಲಿ ಅಸಂಘಟಿತ ಕಾರ್ಮಿಕರು ಗುರುತಿನ ಚೀಟಿ ಪಡೆಯಬಹುದು ;

(ಉ) ಬೆಂಗಳೂರಿನಲ್ಲಿ ಕನಿಷ್ಠ ಪ್ರತಿ ವಿಧಾನಸಭಾ ಕ್ಷೇತ್ರಗಳಲ್ಲಿ ಈ ಅವಕಾಶ ಕಲ್ಪಿಸಬಹುದೇ ?

## ೯೪ಸಿಸಿ ಯ ಅರ್ಜಿದಾರರಿಗೆ ಭೂಮಿಯನ್ನು ಸಕ್ರಮಗೊಳಿಸುವ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೭ (೧೬೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೯೪ಸಿಸಿ ಯ ಅರ್ಜಿದಾರರಿಗೆ ಎಷ್ಟು ಭೂಮಿಯನ್ನು ಸಕ್ರಮಗೊಳಿಸಲು ಅವಕಾಶ ಇದೆ ಇದಕ್ಕೆ ವಿಧಿಸುವ ಶುಲ್ಕ ಎಷ್ಟು ; ಇದಕ್ಕೆ ವಿನಾಯಿತಿಗೊಳಿಸಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಆ) ೯೪ಸಿ ಹಕ್ಕು ಪತ್ರ ನೀಡುವ ಸಂದರ್ಭದಲ್ಲಿ ಅರ್ಜಿದಾರರಿಂದ ವಸೂಲು ಮಾಡುವ ಶುಲ್ಕ ಎಷ್ಟು ; ಇದನ್ನು ವಿನಾಯಿತಿಗೊಳಿಸಲು ಇಲಾಖೆ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಇ) ಅಕ್ರಮ–ಸಕ್ರಮ ಕಾನೂನಿನಡಿ ಸಕ್ರಮಗೊಳಿಸಿದ ಭೂಮಿಗೆ ಯಾವ ಮಾನದಂಡದಲ್ಲಿ ದರವನ್ನು ನಿಗದಿಪಡಿಸಲಾಗಿದೆ ; ನಿಗದಿಪಡಿಸಿದ ದರ ಎಷ್ಟು ? (ವಿವರ ಒದಗಿಸುವುದು)

## ಆನೆಗಳ ಹಾವಳಿಯಿಂದ ರಾಜ್ಯದಲ್ಲಿ ಉಂಟಾದ ಕೃಷಿ ನಷ್ಟದ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೮ (೧೬೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆನೆಗಳ ಹಾವಳಿಯಿಂದ ರಾಜ್ಯದಲ್ಲಿ ಉಂಟಾದ ಕೃಷಿ ನಷ್ಟ ಎಷ್ಟು ; ಸತ್ತವರ ಸಂಖ್ಯೆ ಎಷ್ಟು ; ಅವರಿಗೆ ಒದಗಿಸಿದ ಪರಿಹಾರ ಎಷ್ಟು ; (ವಿವರ ಒದಗಿಸುವುದು)

(ಆ) ಆನೆಗಳ ಹಾವಳಿ ತಡೆಯಲು ಇಲಾಖೆ ತಡೆ ಬೇಲಿಯನ್ನು ರಚಿಸುವುದಾಗಿ ಘೋಷಿಸಿದ್ದರೂ ಈ ತಡೆ ಬೇಲಿಗಳನ್ನು ರಚಿಸದೆ ಇರಲು ಕಾರಣಗಳೇನು ; ರಚಿಸಲಾಗಿದ್ದರೆ ಎಷ್ಟು ಕಿ.ಮೀ. ರಚಿಸಲಾಗಿದೆ ; ಯಾವ ಯಾವ ಭಾಗಗಳಲ್ಲಿ ರಚಿಸಲಾಗಿದೆ ; (ವಿವರ ನೀಡುವುದು)

(ಇ) ಅರಣ್ಯ ಇಲಾಖೆಯ ಅಧಿಕಾರಿಗಳು ವನ್ಯ ಜೀವಿಗಳ ಬಗ್ಗೆ ನಿಗಾ ವಹಿಸದೇ ಕಳ್ಳ ಬೇಟೆ ಆಡುತ್ತಿರುವ ಸಂಖ್ಯೆ ಹೆಚ್ಚಾಗಿರುವುದು ಇಲಾಖೆಯು ಗಮನಕ್ಕೆ ಬಂದಿದೆಯೇ ; ಕಳ್ಳ ಬೇಟೆಯಲ್ಲಿ ಭಾಗಿಯಾದವರ ಬಗ್ಗೆ ಎಷ್ಟು ಕೇಸುಗಳನ್ನು ನೋಂದಾಯಿಸಲಾಗಿದೆ ; ಯಾವ ಯಾವ ಉದ್ದೇಶದಿಂದ ಕೇಸುಗಳನ್ನು ದಾಖಲಿಸಲಾಗಿದೆ ; (ವಿವರಗಳನ್ನು ಒದಗಿಸುವುದು)

(ಈ) ಅರಣ್ಯ ಪ್ರದೇಶದಲ್ಲಿರುವ ಮರಗಳನ್ನು ಅಕ್ರಮವಾಗಿ ಕಡಿದು ಸಾಗಾಟ ಮಾಡುತ್ತಿರುವ ಬಗ್ಗೆ ದೂರುಗಳಿದ್ದು, ಈ ಬಗ್ಗೆ ಇಲಾಖೆ ಎಷ್ಟು ಕೇಸುಗಳನ್ನು ದಾಖಲಿಸಲಾಗಿದೆ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

# ರಾಜ್ಯದಲ್ಲಿ ೯೪ಸಿ ಮತ್ತು ೯೪ಸಿಸಿ ಅಡಿಯಲ್ಲಿ ಇತ್ಯರ್ಥಪಡಿಸಲಾದ ಅರ್ಜಿಗಳ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೯ (೧೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೯೪ಸಿ ಮತ್ತು ೯೪ಸಿಸಿ ಅಡಿಯಲ್ಲಿ ಇತ್ಯರ್ಥಪಡಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ೯೪ಸಿ ಮತ್ತು ೯೪ಸಿಸಿ ಅರ್ಜಿಗಳನ್ನು ಸ್ವೀಕರಿಸಲು ಎಂದಿನಿಂದ ಪ್ರಾರಂಭಿಸಲಾಗಿದೆ ; ಯಾವ ದಿನಾಂಕದಿಂದ ಅರ್ಜಿಗಳನ್ನು ಪಡೆಯಲು ಅವಕಾಶ ಇದೆ ; (ವಿವರ ನೀಡುವುದು)

(ಇ) ೯೪ಸಿಸಿ ಅರ್ಜಿಗಳನ್ನು ಇತ್ಯರ್ಥಪಡಿಸಲು ವಿಶೇಷ ಟ್ರಿಬುನಲ್‌ಗಳನ್ನು (Tribunal) ರಚಿಸಿ ಇತ್ಯರ್ಥಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; (ವಿವರ ಒದಗಿಸುವುದು) ಪ್ರಸ್ತುತ ಈ ಅರ್ಜಿಗಳನ್ನು ಇತ್ಯರ್ಥಪಡಿಸಲು ವಿಳಂಬಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರದ ವಿಶೇಷ ಸವಲತ್ತುಗಳನ್ನು ನೀಡುವ ಯೋಜನೆಗಳಿಗೆ ವಿಶೇಷ ಟ್ರಿಬುನಲ್‌ಗಳನ್ನು ರಚಿಸಿ ಶೀಘ್ರವಾಗಿ ಅರ್ಜಿಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳಲಾಗಿದೆಯೇ ?

25

# ಬೀಡಿ ಕಾರ್ಮಿಕರ ತುಟ್ಟಿಭತ್ಯೆ ರದ್ದುಗೊಳಿಸಿರುವುದನ್ನು ಪುನರ್ ಪರಿಶೀಲಿಸುವ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೧೦ (೧೬೯) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀಡಿ ಕಾರ್ಮಿಕರ ತುಟ್ಟಿಭತ್ಯೆ ರದ್ದುಗೊಳಿಸಿರುವುದನ್ನು ಪುನರ್ ಪರಿಶೀಲಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಮಾಲೀಕರು ತುಟ್ಟಿಭತ್ಯೆಯನ್ನು ನೀಡಲು ನಿರಾಕರಿಸಿರುವುದರಿಂದ ಕಾರ್ಮಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೀಡಿ ಕಾರ್ಮಿಕರಿಗೆ ಸರ್ಕಾರ ವಸತಿ ಯೋಜನೆಯಡಿ ಬೀಡಿ ಕಾರ್ಮಿಕರ ಕಾಲೋನಿಯನ್ನು ನಿರ್ಮಿಸಲು ಕ್ರಮ ಕೈಗೊಳ್ಳುವುದೇ ; (ವಿವರ ಒದಗಿಸುವುದು)

(ಇ) ಬೀಡಿ ಕಾರ್ಮಿಕರ ಮಕ್ಕಳಿಗೆ ನೀಡುವ ಸ್ಕಾಲರ್ ಶಿಪ್‌ನ್ನು ನಿಗದಿತ ಸಮಯಕ್ಕೆ ನೀಡದೇ ಮಕ್ಕಳಿಗೆ ವಿದ್ಯಾಭ್ಯಾಸ ಮುಂದುವರಿಸಲು ತೊಂದರೆಯಾಗುತ್ತಿರುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಒಟ್ಟು ಬೀಡಿ ಕಾರ್ಮಿಕರ ಸಂಖ್ಯೆ ಎಷ್ಟು ; ಬೀಡಿ ಕಾರ್ಮಿಕರ ಪ್ರಸ್ತುತ ಸ್ಥಿತಿಗತಿಗಳನ್ನು ಅಭ್ಯಾಸಿಸಲು ಇಲಾಖೆ ಸಮಿತಿ ರಚಿಸುವುದಾಗಿ ತಿಳಿಸಿದರೂ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ?

## ಕಸ್ತೂರಿರಂಗನ್ ವರದಿಯ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೧೧ (೧೭೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಸ್ತೂರಿರಂಗನ್ ವರದಿಯನ್ನು ತಿರಸ್ಕರಿಸಬೇಕೆಂಬ ಬೇಡಿಕೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಈ ಬಗ್ಗೆ ಕೇಂದ್ರಕ್ಕೆ ಆಕ್ಷೇಪಣೆ ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದರೆ ಅದರ ವಿವರ ನೀಡುವುದು ;

(ಆ) ಕಸ್ತೂರಿರಂಗನ್ ವರದಿಯಿಂದ ಡೀಮ್ಡ್ ಫಾರೆಸ್ಟ್ ಪ್ರದೇಶದಲ್ಲಿ ವಾಸವಾಗಿರುವ ಕುಟುಂಬಗಳಿಗೆ ಹಕ್ಕುಪತ್ರ ನೀಡದೇ ಯಾವುದೇ ಸವಲತ್ತುಗಳನ್ನು ಪಡೆಯಲು ಆಗದೇ ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ಒಟ್ಟು ಡೀಮ್ಡ್ ಫಾರೆಸ್ಟ್ ಪ್ರದೇಶದಲ್ಲಿ ವಾಸವಾಗಿರುವ ಕುಟುಂಬಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಸಕ್ರಮಕ್ಕಾಗಿ ಎಷ್ಟು ಅರ್ಜಿಗಳು ಇಲಾಖೆಯ ಮುಂದೆ ಬಾಕಿ ಇದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಡೀಮ್ಡ್ ಫಾರಸ್ಟ್ ಪ್ರದೇಶದಲ್ಲಿ ವಾಸವಾಗಿರುವ ನಿವಾಸಿಗಳಿಗೆ ಹಕ್ಕುಪತ್ರ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಅರಣ್ಯ ಪ್ರದೇಶದಲ್ಲಿ ವಾಸವಾಗಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಉಮ್ಮತ್ತೂರು ಕೆರೆಗೆ ಕಬಿನಿ ಮೂಲದಿಂದ ನೀರು

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೨ (೧೭೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿರುವ ಭಾರಿ ದೊಡ್ಡಕೆರೆಯಾದ ಉಮ್ಮತ್ತೂರು ಕೆರೆಗೆ ಕಬಿನಿ ಮೂಲದಿಂದ ನೀರು ತುಂಬಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ವಿವರಗಳನ್ನು ಒದಗಿಸುವುದು ;

(ಆ) ಈ ಕೆರೆಗೆ ನೀರು ತುಂಬಿಸುವುದರಿಂದ ಸುತ್ತಮುತ್ತಲ ಸುಮಾರು ಹತ್ತು ಹದಿನೈದು ಹಳ್ಳಿಗಳಿಗೆ ಅನುಕೂಲವಾಗುವುದರ ಜೊತೆಗೆ ಕುಸಿದಿರುವ ಅಂತರ್ಜಲ ಮಟ್ಟ ಸುಧಾರಣೆಯಾಗುವುದರಿಂದ ಕೂಡಲೇ ಈ ಬಗ್ಗೆ ಕ್ರಮ ಜರುಗಿಸಲಾಗುವುದೇ ?

## ಕೊಳ್ಳೇಗಾಲದಲ್ಲಿ ನೂತನ ಉಪನೊಂದಣಾಧಿಕಾರಿ ಕಛೇರಿ ನಿರ್ಮಾಣದ ಬಗ್ಗೆ

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೩ (೨೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಳ್ಳೇಗಾಲದಲ್ಲಿ ಹಾಲಿ ಇರುವ ಉಪನೊಂದಣಾಧಿಕಾರಿಗಳ ಕಛೇರಿ ಕಟ್ಟಡ ಸಂಪೂರ್ಣ ಶಿಥಿಲಗೊಂಡಿದ್ದು, ಅಪಾಯದ ಅಂಚಿನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತಾತ್ಕಾಲಿಕವಾಗಿ ಇದನ್ನು ದುರಸ್ತಿಪಡಿಸಿ ಆಧುನಿಕ ಮಾದರಿಯ ನೂತನ ಉಪ ನೊಂದಣಾಧಿಕಾರಿಗಳ ಕಛೇರಿ ಕಟ್ಟಡವನ್ನು ನಿರ್ಮಿಸಲು ಕ್ರಮ ಜರುಗಿಸಲಾಗುವುದೇ ?

## ಕೆರೆ ತುಂಬಿಸುವ ಯೋಜನೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪ (೨೪೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಿಪ್ಪಗೊಂಡನಹಳ್ಳಿ ಡ್ಯಾಂಗೆ ಹರಿದು ಹೋಗುವ ನೀರಿನಿಂದ, ಮಲ್ಲಸಂದ್ರ ರಾಜಕಾಲುವೆ ಮುಖಾಂತರ ಕೆರೆ ತುಂಬಿಸುವ ಯೋಜನೆಯಡಿಯಲ್ಲಿ ಸೊಂಡೆಕೊಪ್ಪ ಕೆರೆಯನ್ನು ಏತ ನೀರಾವರಿ ಯೋಜನೆ ಮುಖಾಂತರ ಕೆರೆ ತುಂಬಿಸಲು ಸರ್ಕಾರ ಪ್ರಯತ್ನಿಸಬಹುದೇ ;

(ಆ) ಕೆರೆ ತುಂಬಿಸುವ ಬಗ್ಗೆ ಸರ್ಕಾರದ ನಿಲುವೇನು ?

## ತೊಣ್ಣೂರು ಕೆರೆ ಎಡ ಮೇಲ್ದಂಡೆ ನಾಲಾ ಕಾಮಗಾರಿ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೫ (೨೫೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲೆ ತೊಣ್ಣೂರು ಕೆರೆ ಎಡ ಮೇಲ್ದಂಡೆ ನಾಲಾ ಕಾಮಗಾರಿಯು ೨೦೦೬ ರಲ್ಲಿ ಪ್ರಾರಂಭವಾಗಿ ನಾಲಾ ಮಧ್ಯದಲ್ಲಿ ಕಲ್ಲು ಬಂಡೆ ಬಂದಿದ್ದರಿಂದ ಕಂಟ್ರೋಲ್ ಬ್ಲಾಸ್ಟ್ ಮಾಡುವಂತೆ ಒತ್ತಾಯಿಸಿದ ನಂತರ ಸದರಿ ಕಾಮಗಾರಿಯು ಕೆಲಸ ಮುಕ್ತಾಯಗೊಂಡಿಲ್ಲದಿರಲು ಕಾರಣವೇನು ;

(ಆ) ಸದರಿ ಕಾಮಗಾರಿಯ ಪ್ರಗತಿ ಯಾವ ಹಂತದಲ್ಲಿದೆ ; ಇದು ಮುಕ್ತಾಯಗೊಳ್ಳುವುದು ಯಾವಾಗ ಈ ವಿಚಾರವಾಗಿ ಸ್ಥಳೀಯ ರೈತರು ತ್ವರಿತವಾಗಿ ಕಾಮಗಾರಿ ಮುಗಿಸಲು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಇ) ಈ ನಾಲಾ ಕಾಮಾಗಾರಿಯಿಂದ ರೈತರ ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಅನುಕೂಲವಾಗಲಿದೆ ;

(ಈ) ತೊಣ್ಣೂರು ಕೆರೆ ಎಡ ಮೇಲ್ದಂಡೆ ನಾಲೆಗಾಗಿ ಸ್ವಾಧೀನಪಡಿಸಿಕೊಂಡ ಜಮೀನಿನ ವಿಸ್ತೀರ್ಣ ಎಷ್ಟು ; ಸ್ವಾಧೀನಪಡಿಸಿಕೊಂಡ ನಂತರ ಜಮೀನಿನ ರೈತರಿಗೆ ಪರಿಹಾರ ನೀಡಲಾಗಿದೆಯೇ ; ಪ್ರತಿ ಎಕರೆಗೆ ಎಷ್ಟು ಪರಿಹಾರವನ್ನು ನೀಡಲಾಗಿದೆ ; ಇದುವರೆವಿಗೂ ಸದರಿ ನಾಲಾ ಕಾಮಗಾರಿಗಾಗಿ ಸರ್ಕಾರ ಖರ್ಚು ಮಾಡಿರುವ ಹಣವೆಷ್ಟು ?

## ಮೇಕೆದಾಟು ಬಳಿ ನಿರ್ಮಾಣಗೊಳಿಸುತ್ತಿರುವ ಅಣೆಕಟ್ಟಿನ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೬ (೨೫೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೇಕೆದಾಟು ಬಳಿ ಕಾವೇರಿ ನದಿ ಅಣೆಕಟ್ಟು ಕಟ್ಟುವ ಮತ್ತು ವಿದ್ಯುತ್ ಉತ್ಪಾದಿಸುವ ಯೋಜನಾ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ; ಸಲ್ಲಿಸಲಾಗಿದ್ದಲ್ಲಿ ಯಾವಾಗ ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ ;

(ಆ) ಸದರಿ ಅಣೆಕಟ್ಟು ಯೋಜನೆಯಿಂದ ಕುಡಿಯುವ ನೀರಿನ ಯೋಜನೆ ರೂಪಿಸಲಾಗಿದೆಯೇ ;

(ಇ) ಇದಕ್ಕೆ ಸಿ.ಆ.ಸು.ಇ. ಅರಣ್ಯ ಪರಿಸರ ಹಾಗೂ ಇನ್ನಿತರ ಯಾವ ಯಾವ ಇಲಾಖೆಗಳಿಂದ ಅನುಮತಿಯನ್ನು ಪಡೆಯಲಾಗಿದೆ ?

## ಕಗ್ಗಲೀಪುರ ಮೀಸಲು ಅರಣ್ಯ ವಲಯದ ಸೂಲಿಕೆರೆ ಅರಣ್ಯ ಪ್ರದೇಶದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೭ (೧೭೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಗ್ಗಲೀಪುರ ಮೀಸಲು ಅರಣ್ಯ ವಲಯದ ಸೂಲಿಕೆರೆ ಕಾಯ್ದಿಟ್ಟ ಅರಣ್ಯ ಪ್ರದೇಶದ ಒಟ್ಟು ವಿಸ್ತೀರ್ಣವೆಷ್ಟು, ಈ ಅರಣ್ಯ ಪ್ರದೇಶದಲ್ಲಿ ನವಿಲುಗಳ ಬೇಟೆ–ನಿರಂತರವಾಗಿ ನಡೆಯುತ್ತಿದ್ದು ಸದರಿ ಅರಣ್ಯ ಪ್ರದೇಶದಲ್ಲಿ ರಾತ್ರೋರಾತ್ರಿ ಮರಗಳ ಕಳ್ಳತನವಾಗುತ್ತಿರುವ ಬಗ್ಗೆ ತೆಗೆದುಕೊಂಡ ಕ್ರಮವೇನು ;

(ಆ) ಅಳಿವಿನ ಅಂಚಿನಲ್ಲಿರುವ ಕೊಕ್ಕರೆ (ಹೆಬ್ಬಕ) ರಕ್ಷಣೆಗೆ ತೆಗೆದುಕೊಂಡಿರುವ ಕ್ರಮವೇನು ; ರಂಗನತಿಟ್ಟು ಮತ್ತು ಕೊಕ್ಕರೆ ಬೆಳ್ಳೂರು ಪಕ್ಷಿಧಾಮದಲ್ಲಿ ಕಂಡು ಬರುವ ಈ ಸಂಕುಲಗಳ ಉಳಿವಿಗೆ ತೆಗೆದುಕೊಂಡಿರುವ ಕ್ರಮವೇನು ; ಸಂತತಿ ಉಳಿವಿಗಾಗಿ ಕೇಂದ್ರದಿಂದ ನೆರವು ಬಂದಿರುವುದೇ ?

## ಎತ್ತಿನ ಹೊಳೆ ಯೋಜನೆ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೮ (೧೭೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎತ್ತಿನಹೊಳೆ ಯೋಜನೆಯನ್ನು ಕೈಗೊಳ್ಳಲು ಚೆನ್ನೈ ಹಸಿರು ಪೀಠದ ಮುಂದೆ ರಾಜ್ಯ ಸರ್ಕಾರವು ಸಲ್ಲಿಸಿದ ಮನವಿಗೆ ಹಸಿರು ಪೀಠದ ತೀರ್ಪುಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಎತ್ತಿನಹೊಳೆ ಯೋಜನೆಯನ್ನು ಹಸಿರು ಪೀಠದ ತೀರ್ಪಿನಂತೆ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕೆ.ಹೆಚ್.ಡಿ.ಸಿ ಯಿಂದ ಕಳಪೆ ಗುಣಮಟ್ಟದ ಸಮವಸ್ತ್ರಗಳನ್ನು ಸರಬರಾಜು ಮಾಡಿರುವ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೯ (೧೭೫) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ವತಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಲ್ಲಿನ ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಶಾ ಕಾರ್ಯಕರ್ತೆಯರಿಗೆ ಸೀರೆಗಳನ್ನು ಅತ್ಯಂತ ಕಳಪೆ ಗುಣಮಟ್ಟದ ಹಾಗೂ ಅಳತೆಯಲ್ಲಿ ವ್ಯತ್ಯಾಸವಿರುವ ಬಟ್ಟೆಗಳನ್ನು ಸರಬರಾಜು ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ವತಿಯಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಶಾ ಕಾರ್ಯಕರ್ತೆಯರಿಗೆ ಸೀರೆಗಳಿಗೆ ಆಯಾ ಇಲಾಖೆಯಿಂದ ಪಡೆದ ಅನುದಾನ ಎಷ್ಟು ;

(ಇ) ಹಿಂದುಳಿದ ವರ್ಗಗಳ ಪ್ರಧಾನ ಕಾರ್ಯದರ್ಶಿಗಳ ವರದಿಯ ಆಧಾರದ ಮೇಲೆ ಕಳಪೆ ಗುಣಮಟ್ಟದ ವಸ್ತ್ರಗಳನ್ನು ಸರಬರಾಜು ಮಾಡಿದ ಅಧಿಕಾರಿಗಳ ಹಾಗೂ ನೌಕರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಈ ಸರಬರಾಜಿನಿಂದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ಆದ ನಷ್ಟವನ್ನು ಯಾರಿಂದ ಭರಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಉ) ಈ ಮೇಲಿನ ಪ್ರಕರಣಗಳಿಂದ ವಸೂಲಾದ ಒಟ್ಟು ಮೊತ್ತವೆಷ್ಟು ?

## ಬೆಣ್ಣೆತೋರಾ ಯೋಜನೆಯಡಿ ಮುಳಗಿರುವ ಗ್ರಾಮಗಳಿಗೆ ಪುನರ್ ವಸತಿ ಕಲ್ಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೨೦ (೨೪೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ಬೆಣ್ಣೆತೋರಾ ಯೋಜನೆಯ ಅಡಿಯಲ್ಲಿ ಮುಳುಗಡೆಯಾಗಿರುವ ಗ್ರಾಮಗಳು ಎಷ್ಟು ; ಗ್ರಾಮವಾರು ಕುಟುಂಬವಾರು ಹಾಗೂ ಮನೆಗಳ ಮತ್ತು ಧಾರ್ಮಿಕ ಸ್ಥಳಗಳ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಮುಳುಗಡೆಯಾದ ಸಂತ್ರಸ್ಥರಿಗೆ ಪುನರ್‌ವಸತಿ ಕಲ್ಪಿಸಲಾಗಿದೆಯೇ ; ಗ್ರಾಮವಾರು, ನಿವೇಶನ ಹಂಚಿಕೆ ಹಾಗೂ ಮೂಲಭೂತ ಸೌಕರ್ಯಗಳು ಕಲ್ಪಿಸಲಾಗಿದೆಯೇ ; (ಪ್ರತ್ಯೇಕ ಗ್ರಾಮವಾರು ಪುನರ್‌ವಸತಿ ಕೇಂದ್ರಗಳ ವಿವರವಾದ ಮಾಹಿತಿ ನೀಡುವುದು)

(ಇ) ಇನ್ನೂ ಹಲವಾರು ಗ್ರಾಮಗಳ ಸಂತ್ರಸ್ಥರಿಗೆ ಪುನರ್‌ವಸತಿ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಕ್ಕುಪತ್ರ ವಿತರಣೆಯಾಗಿ ನಿವೇಶನ ದೊರಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸರಿಯಾದ ಸಮೀಕ್ಷೆ ಆಗದೆ ಮನೆಗಳು ಕೈಬಿಟ್ಟು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ; ಹೆಚ್ಚುವರಿ ಸಂತ್ರಸ್ತರ ಕುಟುಂಬಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡಲು ಸರ್ಕಾರ ಮುಂದಾಗುವುದೇ ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆ ನೌಬಾದ ಗ್ರಾಮದ ಸರ್ವೆ ನಂ.೭೪ ರಲ್ಲಿ ೪ ಎಕರೆ ೨೪ ಗುಂಟೆ ಕೃಷಿ ಜಮೀನಿನ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೨೧ (೧೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ನೌಬಾದ ಗ್ರಾಮದ ಸರ್ವೆ ನಂ. ೭೪ರಲ್ಲಿ ೪ ಎಕರೆ ೨೪ ಗುಂಟೆ ಕೃಷಿ ಜಮೀನು ಕೃಷಿಯೇತರ ಜಮೀನಾಗಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದು ಯಾವಾಗ ; ಯಾವ ಉದ್ದೇಶಕ್ಕಾಗಿ ಕೃಷಿಯೇತರ ಜಮೀನಾಗಿ ಆದೇಶಿಸಲಾಗಿರುತ್ತದೆ, ಹಾಗೂ ಸದರಿ ಜಮೀನು ಯಾರಿಂದ ಯಾರಿಗೆ ಮತ್ತು ಯಾವಾಗ ಮಾರಾಟ ಮಾಡಲಾಗಿರುತ್ತದೆ ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕೃಷಿಯೇತರ ಜಮೀನಿನಲ್ಲಿ ನಗರ ಯೋಜನೆ ಪ್ರಾಧಿಕಾರ ಬೀದರರವರ ಆದೇಶ ಸಂಖ್ಯೆ : ಬಿ.ಸಿ.ಪಿ.ಎ/೧೩೭/೧೯೮೪–೮೫/೧೭೪, ದಿನಾಂಕ : ೨೬–೦೪–೧೯೮೪ರಲ್ಲಿ ಎಷ್ಟು ನಿವೇಶನಗಳು ಅನುಮೋದನೆ ಹೊಂದಿರುತ್ತವೆ ಹಾಗೂ ಯಾರ ಹೆಸರಿಗೆ ಅನುಮೋದನೆಗೊಂಡಿರುತ್ತವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಜಮೀನು ಕೃಷಿಯೇತರ ಜಮೀನಾಗಿ ಜಿಲ್ಲಾಧಿಕಾರಿಗಳು, ಬೀದರ ಇವರು ದಿನಾಂಕ : ೦೩-೧೨-೯೮೮೪ರಲ್ಲಿ ಆದೇಶ ಹೊರಡಿಸಿ ಪಹಣಿ ಪತ್ರಿಕೆ ಕಾಲಂ ೧೧ ರಲ್ಲಿ ಷರಾ ನಮೂದಿಸಲು ತಹಶೀಲ್ದಾರರು, ಬೀದರ ಇವರಿಗೆ ನೀಡಿದ್ದರೂ ಷರಾ ನಮೂದಿಸದೆ ಇರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಉಪ ನೋಂದಣಾಧಿಕಾರಿ, ಬೀದರ ಇವರ ಕಾರ್ಯಾಲಯದ ಮಾರಾಟ ಕ್ರಯ ಪತ್ರ ಸಂಖ್ಯೆ : ૩೮೬૩/೨೦೦೭-೨೦೦೮ ದಿನಾಂಕ : ೧೭-೦೫/೨೦-೦೮-೨೦೦೭ ರಂದು ಯಾವ ಗ್ರಾಮದ ಎಷ್ಟು ಭೂಮಿ ಯಾರಿಂದ ಯಾರ ಹೆಸರಿಗೆ ಎಷ್ಟು ಬೆಲೆಯಲ್ಲಿ ಕ್ರಯ ಪತ್ರ ನೋಂದಣಿ ಮಾಡಲಾಗಿದೆ ; ಗ್ರಾಮ, ಭೂಮಿ, ಮೊತ್ತದ ಸಂಪೂರ್ಣ ವಿವರ ನೀಡುವುದು ?

## ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಬೋನಾಳ ಕೆರೆ ಒತ್ತುವರಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):-**

೧೨೨ (೨೫೯) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಸಮೀಪದಲ್ಲಿರುವ ಬೋನಾಳ ಕೆರೆ ಒಟ್ಟು ವಿಸ್ತೀರ್ಣವೆಷ್ಟು ಹಾಗೂ ಯಾವ ಇಲಾಖೆಯ ವ್ಯಾಪ್ತಿಯಲ್ಲಿರುತ್ತದೆ ;

(ಆ) ಬೋನಾಳ ಕೆರೆಯು ಅನಧಿಕೃತವಾಗಿ ಒತ್ತುವರಿಯಾಗಿದೆಯೇ ; ಹಾಗಿದ್ದರೆ, ಒತ್ತುವರಿಯಾಗಿರುವ ವಿಸ್ತೀರ್ಣವೆಷ್ಟು ; ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು ;

(ಇ) ಬೋನಾಳ ಕೆರೆಯಲ್ಲಿ ಅತಿಕ್ರಮವಾಗಿ ಮೀನುಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಮಳೆ ಕೊರತೆಯಿಂದ ಬೆಳೆ ನಷ್ಟದ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ):–**

೧೨೩ (೧೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬೆಳೆ ನಷ್ಟಕ್ಕೆ ಒಳಗಾದ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೆಳೆ ನಷ್ಟಕ್ಕೆ ಒಳಗಾದ ರೈತರಿಗೆ ಪರಿಹಾರಕ್ಕಾಗಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಲ್ಲಿಯವರೆಗೂ ಎಷ್ಟು ಜನ ರೈತರಿಗೆ ಬೆಳೆ ನಷ್ಟ ಪರಿಹಾರ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಹೈದರಾಬಾದ್–ಕರ್ನಾಟಕ ಭಾಗದ ಪ್ರದೇಶಗಳಲ್ಲಿ ಎಷ್ಟು ಎಕರೆಗಳಿಗೆ ಬೆಳೆ ನಷ್ಟ ಪರಿಹಾರ ನೀಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಗ್ರಾಮಾಂತರ ಪ್ರದೇಶದ ಸಣ್ಣ ಕೆರೆಗಳ ಬಗ್ಗೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೨೪ (೧೮೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಗ್ರಾಮಾಂತರ ಪ್ರದೇಶದಲ್ಲಿ ಇದ್ದ ಕೆರೆಗಳ ಸಂಖ್ಯೆ ಎಷ್ಟು ;

(ಆ) ಅದಕ್ಕೆ ಮತ್ತೆ ಜೀವ ಕೊಡುವ/ಜೀರ್ಣೋದ್ಧಾರ ಕೆಲಸ ನಡೆದಿದೆಯೇ;

(ಇ) ಇದಕ್ಕಾಗಿ, ಸರ್ಕಾರ ಖರ್ಚು ಮಾಡಿರುವ ಅನುದಾನ ಎಷ್ಟು ?

## ಪ್ರತಿ ಜಿಲ್ಲಾಧಿಕಾರಿಗಳ ಮಿಸ್ಸಲೇನಿಯಸ್ ಪಿ.ಡಿ. ಅಕೌಂಟ್ ಬಗ್ಗೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) ಮತ್ತು ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೨೫ (೨೬೯+೨೪೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪ್ರತಿ ಜಿಲ್ಲಾಧಿಕಾರಿಗಳ ಮಿಸ್ಸಲೇನಿಯಸ್ ಪಿ.ಡಿ. ಅಕೌಂಟ್ ಯಾವುವು ; ಪ್ರತಿಯೊಂದರ ವಿವರ ನೀಡುವುದು ; ೨೦೧೫ ಡಿಸೆಂಬರ್ ೩೧ಕ್ಕೆ ಕೊನೆಗೊಂಡಂತೆ ಆ ಖಾತೆಯಲ್ಲಿರುವ ಹಣದ ವಿವರ ; (ಪ್ರತಿ ಖಾತೆಯ ಕಳೆದ ೦೩ ವರ್ಷಗಳ ಜಮಾ ಖರ್ಚು ವಿವರ ನೀಡುವುದು)

(ಆ) ೨೦೦೮ ರಿಂದ ೨೦೧೩ರ ಅವಧಿಯ ಶಾಸಕರ ನಿಧಿಯ ಖರ್ಚು ವೆಚ್ಚಗಳ ಪ್ರತಿಂಯೊಬ್ಬ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿಯ ಅನುದಾನದ ಜಮಾ ಖರ್ಚು ವಿವರ ನೀಡುವುದು ಈ ಅವಧಿಯ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಖರ್ಚಾಗದೇ ಉಳಿದಿರುವ ಹಣವೆಷ್ಟು ;

(ಇ) ಜಿಲ್ಲಾಧಿಕಾರಿಗಳ ಹಂತದಲ್ಲಿ ಕಾರ್ಯದೊತ್ತಡ ಅತಿಯಾಗಿದ್ದು ಶಾಸಕರ, ಸಂಸದರ ಪ್ರದೇಶಾಭಿವೃದ್ಧಿ ನಿಧಿಯ ಬಳಕೆಯಲ್ಲಿ ವಿಳಂಬ, ಅನಗತ್ಯ ದಾಖಲೆಗಳ ಕೇಳುವಿಕೆ, ಹಾಗೂ ಜನರ ಅಲೆದಾಟ ತಪ್ಪಿಸಲು ಸರ್ಕಾರದ ಕ್ರಮವೇನು ;

(ಈ) ಉಪ ವಿಭಾಗಾಧಿಕಾರಿಗಳ ಹಂತದಿಂದ ಶಾಸಕರ, ಸಂಸದರ ಪ್ರದೇಶಾಭಿವೃದ್ಧಿ ನಿಧಿಯನ್ನು ನಿರ್ವಹಣೆ ಮಾಡಲು ಸರ್ಕಾರ ಯೋಚಿಸುವುದೇ ?

## ಸಕಾಲದಡಿಯಲ್ಲಿ ಇ–ಖಾತೆ ಇತ್ಯರ್ಥ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೬ (೧೮೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಜಿಲ್ಲೆಯಲ್ಲಿ ಇ–ಸ್ವತ್ತು ಖಾತೆಗಾಗಿ ಅರ್ಜಿ ಹಾಕಿದವರ ಸಂಖ್ಯೆ ಎಷ್ಟು ;

(ಆ) ಸಕಾಲದಡಿಯಲ್ಲಿ ಇತ್ಯರ್ಥಕ್ಕೆ ಬೇಕಾಗಿರುವ ಕಾಲಾವಧಿ ಎಷ್ಟು ;

(ಇ) ಹಾಗಿದ್ದಲ್ಲಿ, ಇತ್ಯರ್ಥ ಆಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಆಗದೆ ಇರುವ ಅರ್ಜಿಗಳ ಸಂಖ್ಯೆ ಎಷ್ಟು ?

## ಯುವ ಕ್ರೀಡಾ ಮಿತ್ರ ಯೋಜನೆ

**ಶ್ರೀ ಮಹಂತೇಶ ಎಸ್. ಕೌಜಲಗಿ (ಪದವೀಧರರ ಕ್ಷೇತ್ರ):–**

೧೨೭ (೨೨೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ಪ್ರದೇಶಗಳಲ್ಲಿ ಯುವ ಕ್ರೀಡಾ ಮಿತ್ರ ಯೋಜನೆಗಳನ್ನು ಕೈಗೊಳ್ಳಲು ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ಎಷ್ಟು ಹಣ ಖರ್ಚಾಗಿರುತ್ತದೆ ; ಆ ಪೈಕಿ ಖರ್ಚಾಗಿರುವ ಹಣ ಎಷ್ಟು ;

(ಆ) ಯಾವ ಯಾವ ಷರತ್ತುಗಳನ್ವಯ ಈ ಹಣ ಬಿಡುಗಡೆ ಮಾಡಲಾಗಿದೆ ;

(ಇ) ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಯಾವ ಯಾವ ಸ್ಥಳಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ ; ಸ್ಥಳಗಳ ವಿವರ ನೀಡುವುದು ಹಾಗೂ ಪ್ರತಿಯೊಂದಕ್ಕೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ;

(ಈ) ಈ ಯೋಜನೆಯ ಗುರಿ ಹಾಗೂ ಉದ್ದೇಶಗಳೇನು ;

(ಉ) ಆಯ್ಕೆ ಪ್ರಕ್ರಿಯೆಗೆ ಯಾವ ಮಾನದಂಡಗಳನ್ನು ಅನುಸರಿಸಲಾಗುವುದು ; ಆಯ್ಕೆ ಪ್ರಾಧಿಕಾರವು ಯಾವ ಅಧಿಕಾರಿಗಳನ್ನು ಒಳಗೊಂಡಿರುತ್ತದೆ ;

(ಊ) ಪ್ರತಿಯೊಂದು ಘಟಕಕ್ಕೆ ಎಷ್ಟು ಹಣ ಕೊಡಲಾಗುವುದು ; ಗ್ರಾಮೀಣ ಕ್ರೀಡಾ ಪಟುಗಳಿಗೆ ಇದರಿಂದಾಗುವ ಪ್ರಯೋಜನ ಏನು ?

## ಬರ ಪರಿಹಾರಕ್ಕೆ ಕೇಂದ್ರದಿಂದ ಬಿಡುಗಡೆಯಾದ ಹಣದ ವಿವರ ಒದಗಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೧೨೮ (೨೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎದುರಾದ ಭೀಕರ ಬರ ಪರಿಹಾರ ಹಾಗೂ ನಿರ್ವಹಣೆಗೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ;

(ಆ) ಕೇಂದ್ರ ಸಚಿವರು, ರಾಜ್ಯಕ್ಕೆ ೧೫೪೦ ಕೋಟಿ ರೂ. ಬಿಡುಗಡೆ ಮಾಡಲಾದ ಹಣವನ್ನು ರಾಜ್ಯ ಸರ್ಕಾರ ರೈತರಿಗೆ ಇನ್ನೂ ಬಿಡುಗಡೆ ಮಾಡಿಲ್ಲದಿರುವುದು ನಿಜವೇ ; ಹಾಗಿದ್ದಲ್ಲಿ ಬಿಡುಗಡೆ ಮಾಡಲಾಗುವುದು ಯಾವಾಗ ;

(ಇ) ರಾಜ್ಯದ ಎಷ್ಟು ತಾಲ್ಲೂಕುಗಳು ಬರಗಾಲಕ್ಕೆ ತುತ್ತಾಗಿರುತ್ತವೆ ;

(ಈ) ರಾಜ್ಯ ಸರ್ಕಾರವು ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗೆ ಬರ ಪರಿಹಾರ ಕೆಲಸ ಕೈಗೊಳ್ಳಲು ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಶಿವಯೋಗಮಂದಿರದಲ್ಲಿ ಹಾಗೂ ಬೆಳಗಾವಿ ತಾಲ್ಲೂಕಿನ ಭೂತಾರಾಮನಹಟ್ಟಿ ಮುಕ್ತಿಮಠದ ಓಣಿಯಲ್ಲಿ ಇರುವ ಶಾಲೆಯ ಮಕ್ಕಳಿಗೆ ಮತ್ತು ಬೈಲಹೊಂಗಲ ತಾಲ್ಲೂಕಿನ ದೇವಲಾಪೂರ ಗ್ರಾಮದ ವಿಸ್ತರಣೆ ಪ್ರದೇಶದಲ್ಲಿ ಹಾಗೂ ಜೈನಮಂದಿರ ಸಮೀಪವಿರುವ ಶಾಲೆಯ ಮಕ್ಕಳಿಗೆ ಕುಡಿಯುವ ನೀರಿನ ತೊಂದರೆ ಇದ್ದು, ಕೂಡಲೆ ತೊಂದರೆ ತಪ್ಪಿಸಲು ಕ್ರಮ ಕೈಗೊಳ್ಳಲು ಪತ್ರ ಬರೆದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಮಹದಾಯಿ ನದಿ ತಿರುವು ಯೋಜನೆ ವಿವಾದ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೧೭೯ (೨೨೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹದಾಯಿ ನದಿ ತಿರುವು ಯೋಜನೆ ವಿವಾದವನ್ನು ನ್ಯಾಯಾಧೀಕರಣದ ಹೊರಗೆ ಇತ್ಯರ್ಥಪಡಿಸುವಂತೆ ಪ್ರಧಾನ ಮಂತ್ರಿಗಳ ಮೇಲೆ ಒತ್ತಡ ತರಲು ರಾಜ್ಯದ ಎಲ್ಲಾ ಪಕ್ಷಗಳ ಸಂಸತ್ ಸದಸ್ಯರ ಸಭೆ ಕರೆದು ಇನ್ನೊಮ್ಮೆ ಪ್ರಯತ್ನಿಸಲಾಗುವುದೇ;

(ಆ) ಪ್ರಧಾನ ಮಂತ್ರಿಗಳು ಮೂರು ರಾಜ್ಯಗಳ ಮುಖ್ಯಮಂತ್ರಿಗಳನ್ನು ಕರೆದು ಈ ವಿಷಯವನ್ನು ಇತ್ಯರ್ಥಗೊಳಿಸಲು ಪ್ರಯತ್ನಿಸಿದರೆ ಈ ವಿಷಯ ನ್ಯಾಯಾಧೀಕರಣದ ಹೊರಗೆ ಇತ್ಯರ್ಥವಾದಲ್ಲಿ

ರಾಜ್ಯದ ಜನರಿಗೆ ಅನುಕೂಲವಾಗುವುದು ಎಂಬ ಸಂಗತಿಯನ್ನು ನಮ್ಮ ರಾಜ್ಯದ ಸಂಸತ್ ಸದಸ್ಯರ ಮುಖಾಂತರ ಪ್ರಧಾನ ಮಂತ್ರಿಗಳ ಮೇಲೆ ಒತ್ತಡ ತರಲಾಗುವುದೇ ;

(ಇ) ಈ ಯೋಜನೆ ನ್ಯಾಯಾಧೀಕರಣದ ಹೊರಗೆ ಇತ್ಯರ್ಥಗೊಳ್ಳುವುದರಿಂದ ಕೂಡಲೇ ಈ ವಿವಾದ ಬಗೆಹರಿಯುವುದರಿಂದ ಈ ಭಾಗದ ಜನರಿಗೆ ಕುಡಿಯುವ ನೀರಿನ ತೊಂದರೆ ತಪ್ಪುವುದು ಎಂಬ ಸಂಗತಿಯನ್ನು ಪ್ರಧಾನ ಮಂತ್ರಿಗಳ ಗಮನಕ್ಕೆ ತರಲಾಗುವುದೇ ?

## "ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ" ಕಾರ್ಯಕ್ರಮದ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೧೩೦ (೨೨೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆರೆಗಳ ಸಮಗ್ರ ಅಭಿವೃದ್ಧಿಗಾಗಿ ೨೦೧೫–೧೬ನೇ ಆಯವ್ಯಯದಲ್ಲಿ ಘೋಷಣೆ ಮಾಡಿರುವ "ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ" ಕಾರ್ಯಕ್ರಮದಡಿಯಲ್ಲಿ ರಾಜ್ಯದಲ್ಲಿನ ಎಷ್ಟು ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ ;

(ಆ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಬರುವ ಎಷ್ಟು ಕೆರೆಗಳ ಅಭಿವೃದ್ಧಿ ಕಾರ್ಯಗಳನ್ನು ಯೋಜನೆಯಡಿಯಲ್ಲಿ ಕೈಗೊಳ್ಳಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕಳಸಾ ಬಂಡೂರಿ ನಾಲಾ ತಿರುವು ಯೋಜನೆಗೆ ಇಲ್ಲಿಯವರೆಗೆ ಖರ್ಚಾದ ಹಣದ ವಿವರ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೧೩೧ (೨೧೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳಸಾ ಬಂಡೂರಿ ನಾಲಾ ತಿರುವು ಯೋಜನೆಗೆ ಇಲ್ಲಿಯವರೆಗೆ ಖರ್ಚಾಗಿರುವ ಹಣ ಎಷ್ಟು ;

(ಆ) ಈ ಯೋಜನೆಗೆ ೨೦೦೧–೨೦೦೨ನೇ ಸಾಲಿನ ಆಯವ್ಯಯದಲ್ಲಿ ಎಷ್ಟು ಹಣ ಬಿಡುಗಡೆ ಆಗಿದೆ ; ಆ ಪೈಕಿ ಖರ್ಚಾಗಿರುವ ಹಣ ಎಷ್ಟು ;

(ಇ) ೨೦೦೩ನೇ ಸಾಲಿನಲ್ಲಿ ಈ ಯೋಜನೆಗೆ ಎಷ್ಟು ಹಣ ಒದಗಿಸಲಾಗಿತ್ತು ಹಾಗೂ ಎಷ್ಟು ಹಣ ಬಿಡುಗಡೆಯಾಗಿದೆ ಮತ್ತು ಎಷ್ಟು ಹಣ ಖರ್ಚಾಗಿರುತ್ತದೆ ; ಆ ಸಾಲಿನಲ್ಲಿ ಬೃಹತ್ ನೀರಾವರಿ ಸಚಿವರು ಯಾರು ಇದ್ದರು ?

## ಅರಣ್ಯ ಭೂಮಿ ಒತ್ತುವರಿ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೨ (೨೨೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಎಕರೆ ಅರಣ್ಯ ಪ್ರದೇಶ ಒತ್ತುವರಿಯಾಗಿದೆ ;

(ಆ) ಒತ್ತುವರಿ ಮಾಡಿಕೊಂಡಿರುವವರು ಯಾರು ; ಅವರುಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; ಎಷ್ಟು ಪ್ರದೇಶವನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಇ) ಒತ್ತುವರಿದಾರರಿಗೆ ಇಲಾಖೆಯ ಅಧಿಕಾರಿಗಳು ಸಾತ್ ನೀಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳು ಯಾರು ; ಇವರುಗಳ ವಿರುದ್ಧ ಸರ್ಕಾರ ಕೈಗೊಂಡ ಶಿಸ್ತಿನ ಕ್ರಮವೇನು ?

## ಕಾರ್ಮಿಕರ ಕ್ಷೇಮಾಭಿವೃದ್ಧಿ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೩ (೨೨೬) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದ ಕಾರ್ಮಿಕರ ಕ್ಷೇಮಾಭಿವೃದ್ಧಿಗೆ ವೆಚ್ಚ ಮಾಡಿರುವ ಅನುದಾನವೆಷ್ಟು ;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಈ ಅನುದಾನವನ್ನು ವೆಚ್ಚ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಳಸಾ ಬಂಡೂರಿ ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೪ (೨೨೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದ ಮಹಾತ್ವಾಕಾಂಕ್ಷೆ ಯೋಜನೆಯಾದ "ಕಳಸಾ ಬಂಡೂರಿ" ಯೋಜನೆಯ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವ ವಿಚಾರವಾಗಿ ಗೋವಾ ಮತ್ತು ಮಹಾರಾಷ್ಟ್ರ ಸರ್ಕಾರಗಳೊಂದಿಗೆ ಸಮಾಲೋಚನೆ ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ;

(ಇ) ನ್ಯಾಯಮಂಡಳಿಗೆ ಮಧ್ಯಂತರ ಅರ್ಜಿ ಸಲ್ಲಿಸುವ ವಿಚಾರದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ಯೋಜನೆಯ ವಿಚಾರವಾಗಿ ಸರ್ಕಾರ ಈವರೆಗೂ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ಬರ ಪೀಡಿತ ಪ್ರದೇಶಗಳ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫ (೨೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಈ ಬಾರಿ ಬರ ಪೀಡಿತ ಪ್ರದೇಶಗಳೆಂದು ಘೋಷಿಸಿರುವ ತಾಲ್ಲೂಕುಗಳು ಯಾವುವು ;

(ಆ) ಸದರಿ ಬರ ಪೀಡಿತ ತಾಲ್ಲೂಕುಗಳಿಗೆ ಬಿಡುಗಡೆ ಮಾಡಿದ ಬೆಳೆ ಪರಿಹಾರ ಧನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಕೇಂದ್ರದಿಂದ ರಾಜ್ಯಕ್ಕೆ ಬಂದಿರುವ ಬೆಳೆ ಪರಿಹಾರವೆಷ್ಟು ; ಇದರಲ್ಲಿ ಬೆಳಗಾವಿ ಜಿಲ್ಲೆಗೆ ನೀಡಿರುವ ಪರಿಹಾರದಲ್ಲಿ ಕೇಂದ್ರದ ಮತ್ತು ರಾಜ್ಯದ ಪಾಲೆಷ್ಟು ; (ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲಾದ್ಯಾಂತ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; ಸದರಿ ರೈತರ ಕುಟುಂಬಕ್ಕೆ ಒದಗಿಸಿರುವ ಪರಿಹಾರ ಧನವೆಷ್ಟು ? (ರೈತರ ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

## ಜವಳಿ ಪಾರ್ಕ್ ಸ್ಥಾಪಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೬ (೨೩೦) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೆಚ್ಚಿನ ಉದ್ಯೋಗ ಸೃಷ್ಟಿಸುವ ಉದ್ದೇಶದಿಂದ ಜವಳಿ ಪಾರ್ಕ್ ಸ್ಥಾಪಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ ; ಯಾವ ಯಾವ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು; (ಮಾಹಿತಿ ನೀಡುವುದು)

(ಇ) ಜವಳಿ ಪಾರ್ಕ್ ಸ್ಥಾಪಿಸಲು ನೆರವು ನೀಡಲಾಗುತ್ತದೆಯೇ ; ಈಗಾಗಲೇ ಸರ್ಕಾರದ ಮುಂದೆ ಇರುವ ಪ್ರಸ್ತಾವನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಒಟ್ಟು ಎಷ್ಟು ಉದ್ಯೋಗಗಳನ್ನು ಸೃಷ್ಟಿಸುವ ಯೋಜನೆ ಸರ್ಕಾರದ ಮುಂದಿದೆ ; ಇದರಲ್ಲಿ ಕನ್ನಡಿಗರಿಗೆ ಪ್ರತ್ಯೇಕವಾಗಿ ಇರುವ ಶೇಕಡವಾರು ಪ್ರಮಾಣವೆಷ್ಟು ;

(ಉ) under ಯಾವ ಕಾಲಮಿತಿಯಲ್ಲಿ ಈ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗುವುದು ?

## ಕಾನೂನು ಉಲ್ಲಂಘಿಸಿ ಸಿಮೆಂಟ್ ಕಾರ್ಖಾನೆ ಸ್ಥಾಪನೆಗೆ ಎನ್.ಓ.ಸಿ ನೀಡಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೭ (೨೩೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಂಚೋಳಿ ತಾಲ್ಲೂಕಿನ ಸಿಮೆಂಟ್ ಕಾರ್ಖಾನೆ ಸ್ಥಾಪನೆಗೊಂಡಿದ್ದು ಅರಣ್ಯ ಇಲಾಖೆಯಿಂದ ಎನ್.ಓ.ಸಿ. ನೀಡಿದ್ದು ಯಾವಾಗ ; (ದಿನಾಂಕ ಹಾಗೂ ಪ್ರಮಾಣ ಪತ್ರದ ಪ್ರತಿ ಒದಗಿಸುವುದು)

(ಆ) ಈ ಕಾರ್ಖಾನೆಗೆ ಕಾನೂನು ಉಲ್ಲಂಘನೆ ಮಾಡಿ ಎನ್.ಓ.ಸಿ. ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮವೇನು ಮತ್ತು ಕಾನೂನು ಉಲ್ಲಂಘಿಸಿದ ಅಧಿಕಾರಿಗಳು ಯಾರು ; ಸಂಬಂಧಪಟ್ಟವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಚಿಟ್ಟೆನಾಡು ಸಿಮೆಂಟ್ ಕಾರ್ಖಾನೆ ಹಾಗೂ ಅರಣ್ಯ ಪ್ರದೇಶಕ್ಕೆ ಇರುವ ಅಂತರವೆಷ್ಟು ; ಹಾಗೂ ಚಿಟ್ಟೆನಾಡು ಶಾಖೆಯ ಮತ್ತು ಹತ್ತಿರದ ಅರಣ್ಯ ಪ್ರದೇಶದ ಜಿ.ಪಿ.ಎಸ್. ರೀಡಿಂಗ್ ಅಂತರ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಮೀನುಗಾರರಿಗೆ ವಸತಿ/ವಿವಿಧ ಸೌಲಭ್ಯಗಳ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೮ (೨೩೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕದ ಜಿಲ್ಲೆಗಳಲ್ಲಿ ಮೀನುಗಾರಿಕೆ ಇಲಾಖಾ ವತಿಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಮೀನುಗಾರರಿಗೆ ಸರ್ಕಾರ ಜಾರಿಗೆ ತಂದ ವಿವಿಧ ಕಾರ್ಯಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗಾಗಿ ಮೀಸಲಿಟ್ಟ ಹಣ ಎಷ್ಟು ; ಖರ್ಚಾದ/ಉಳಿದ ಹಣ ಎಷ್ಟು ; ಉಳಿಯಲು ಕಾರಣಗಳೇನು ; (ವಿವರ ಒದಗಿಸುವುದು)

(ಇ) ಈ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮೀನುಗಾರರಿಗೆ ವಸತಿ ಸೌಲಭ್ಯ ಹಾಗೂ ಇನ್ನಿತರ ಸೌಲಭ್ಯ ನೀಡುವ ಕಾರ್ಯಕ್ರಮ ಜಾರಿಯಲ್ಲಿದೆಯೇ ; (ಮಾಹಿತಿ ಒದಗಿಸುವುದು)

(ಈ) ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗಕ್ಕೆ ಸೇರಿದ ಜನರಿಗೆ ವಸತಿ ಮತ್ತು ಇತರ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ ? (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕೆರೆಗಳಿಗೆ ನೀರು ತುಂಬಿಸುವ ಶಾಶ್ವತ ನೀರಾವರಿ ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೧೫೯ (೨೩೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಗಳಲ್ಲಿರುವ ಕೆರೆಗಳನ್ನು ತುಂಬಿಸಲು ಹಾಗೂ ಕೃಷಿ ಚಟುವಟಿಕೆಗಳಿಗೆ ನೀರುಣಿಸಲು ಸರ್ಕಾರ ರೂಪಿಸಿರುವ ಶಾಶ್ವತ ನೀರಾವರಿ ಯೋಜನೆಗಳಾವುವು ; (ಯೋಜನೆಗಳ ವಿವರಗಳನ್ನು ನೀಡುವುದು)

(ಆ) ಈ ಯೋಜನೆಗಳ ಅನುಷ್ಠಾನಕ್ಕಾಗಿ ತಗಲುವ ಅಂದಾಜು ವೆಚ್ಚ ಎಷ್ಟು ; ಯೋಜನೆಗಳನ್ನು ಪೂರ್ಣಗೊಳಿಸಲು ಬೇಕಾಗಿರುವ ಕಾಲಾವಧಿ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಕಂದಾಯ ಇಲಾಖೆಯಲ್ಲಿ ಪೋಡಿಗಾಗಿ ವಿಳಂಬವಾಗುತ್ತಿರುವ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೦ (೨೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಜಮೀನುಗಳನ್ನು ಪೋಡಿ ಮಾಡಿಸಿಕೊಳ್ಳಲು ಬಂದಿರುವ ಅರ್ಜಿಗಳೆಷ್ಟು ;

(ಆ) ಪೋಡಿ ಮಾಡಲು ಇಲಾಖೆಯಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಜಮೀನುದಾರರಿಂದ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಪೋಡಿ ಮಾಡಲು ಆಗುತ್ತಿರುವ ವಿಳಂಬಕ್ಕೆ ಕಾರಣ ಏನು ; ಜಮೀನುದಾರರಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಈ) ಬಡ ರೈತರ ಪೋಡಿ ಮಾಡಲು ಎಲ್ಲಾ ತಹಶೀಲ್ದಾರ್ ಕಛೇರಿಯ ನೌಕರರು/ಸಿಬ್ಬಂದಿಗಳು ಸಾಕಷ್ಟು ತೊಂದರೆ ನೀಡುತ್ತಿದ್ದು ಸದರಿ ನೌಕರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಸಣ್ಣ ಕೆರೆಗಳ ಅಭಿವೃದ್ಧಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೧ (೨೩೬) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿದ ಕೆರೆಗಳೆಷ್ಟು ;

(ಆ) ಈ ಕೆರೆಗಳನ್ನು ಅಭಿವೃದ್ಧಿಪಡಿಸಲು ಕಳೆದ ಸಾಲಿನಲ್ಲಿ ಬಿಡುಗಡೆಯಾದ ಹಣವೆಷ್ಟು ; ಖರ್ಚಾಗಿರುವ ಹಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಕೈಗೊಂಡಿರುವ ಏತ ನೀರಾವರಿ ಯೋಜನೆಗಳೆಷ್ಟು; ಮತ್ತು ಯಾವುವು ;

(ಈ) ಈ ಯೋಜನೆಗೆ ಕಳೆದ ಸಾಲಿನಲ್ಲಿ ಒದಗಿಸಲಾಗಿದ್ದ ಹಣ ಎಷ್ಟು; ಆ ಪೈಕಿ ಖರ್ಚಾಗಿರುವ ಮೊತ್ತ ಎಷ್ಟು; ಬಾಕಿ ಉಳಿದಿರುವ ಮೊತ್ತ ಎಷ್ಟು; ಬಳಕೆಯಾಗದೆ ಬಾಕಿ ಉಳಿಯಲು ಕಾರಣಗಳೇನು ?

## ಕಾಡು ಪ್ರಾಣಿಗಳ ಹಾವಳಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೨ (೨೩೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಡು ಪ್ರಾಣಿಗಳು ಜನವಸತಿ ಪ್ರದೇಶಗಳಿಗೆ ಹಾಗೂ ರೈತರ ಹೊಲಗಳಿಗೆ ಒಂದು ಪ್ರಾಣಿಹಾನಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಎರಡು ವರ್ಷಗಳಿಂದ ಎಷ್ಟು ಕಡೆ ಚಿರತೆ ಆನೆ ಮುಂತಾದ ವನ್ಯ ಮೃಗಗಳಿಂದ ದಾಳಿಯಾಗಿದೆ ; ಎಷ್ಟು ಜನ ಸಾವಿಗೀಡಾಗಿದ್ದಾರೆ ; ಎಷ್ಟು ಜನ ಗಾಯಗೊಂಡಿದ್ದಾರೆ ಹಾಗೂ ಬೆಳೆಹಾನಿ ಪ್ರಮಾಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ವನ್ಯ ಮೃಗಗಳು ಕಾಡಿನಿಂದ ನಾಡಿಗೆ ಬರಲು ಪ್ರಮುಖ ಕಾರಣಗಳೇನು ; ಇದನ್ನು ತಪ್ಪಿಸಲು ಹಾಗೂ ಜನರಿಗೆ ರಕ್ಷಣೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಯುವ ಸಬಲೀಕರಣ ಹಾಗೂ ಕ್ರೀಡಾ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೩ (೨೩೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಈ ಸಾಲಿಗೆ ಯುವ ಜನ ಮತ್ತು ಕ್ರೀಡಾ ಇಲಾಖೆಗೆ ನೀಡಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು;

(ಆ) ಈ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಉಪಯೋಗಿಸಲಾಗಿದೆ; ಕಾರ್ಯಕ್ರಮಗಳ ವಿವರ ನೀಡುವುದು;

(ಇ) ರಾಜ್ಯದಲ್ಲಿ ಯುವ ಸಬಲೀಕರಣ ಹಾಗೂ ಕ್ರೀಡೆಗಳ ಅಭಿವೃದ್ಧಿಗಾಗಿ ಇಲಾಖೆಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ; ಅದರ ಅನುಷ್ಠಾನಕ್ಕಾಗಿ ಮೀಸಲಿಟ್ಟ ಹಣ ಎಷ್ಟು ? (ವಿವರಗಳನ್ನು ನೀಡುವುದು)

## ರಾಜ್ಯದಲ್ಲಿರುವ ಐ.ಟಿ.ಐ ಕಾಲೇಜುಗಳ ಗುಣಮಟ್ಟ ನಿಗಧಿ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೪೪ (೨೪೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಐ.ಟಿ.ಐ ಕಾಲೇಜುಗಳ ಗುಣಮಟ್ಟ ನಿಗಧಿಗೆ ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮ ಏನು ; (ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ವಿವರ ನೀಡುವುದು)

(ಆ) ಭಾರತ ಗುಣಮಟ್ಟ ಪರಿಷತ್ತಿನಿಂದ ಐ.ಟಿ.ಐ ಕಾಲೇಜುಗಳ ಮೌಲ್ಯಮಾಪನ ಹಾಗೂ ಅಕ್ರಿಡೇಷನ್‌ಗೆ ಒಳಪಡಿಸಲು ನಿರ್ಣಯಿಸಲಾಗಿದೆಯೇ; ಈ ನಿಟ್ಟಿನಲ್ಲಿ ಸರ್ಕಾರ ಆ ಸಂಸ್ಥೆಗಳಿಗೆ ನೀಡುತ್ತಿರುವ ಆಡಳಿತಾತ್ಮಕ ತಾಂತ್ರಿಕ ಹಣಕಾಸು ನೆರವು ಏನು;

(ಇ) ಈ ಒಟ್ಟು ಪ್ರಕ್ರಿಯೆ ರಾಜ್ಯದಲ್ಲಿ ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರ ನೀಡುವುದು)

## ಕೃಷ್ಣಾ ಕೊಳ್ಳದ ಯೋಜನೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೪೫ (೨೪೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪, ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಕೃಷ್ಣಾ ಕೊಳ್ಳದ ಯೋಜನೆಗಳಿಗೆ ಒದಗಿಸಿದ ಬಿಡುಗಡೆಯಾದ ವಿನಿಯೋಗವಾದ ಹಣ ಎಷ್ಟು ; (ಜಿಲ್ಲಾವಾರು ಹಾಗೂ ಯೋಜನಾವಾರು ವಿವರ ನೀಡುವುದು)

(ಆ) ಈ ಅವಧಿಗಳಲ್ಲಿ ಭೂ–ಸ್ವಾಧೀನ ಹಾಗೂ ಪುನರ್ ವಸತಿಗೆ ಒದಗಿಸಿ, ಬಿಡುಗಡೆಯಾದ ಹಾಗೂ ವಿನಿಯೋಗವಾದ ಹಣ ಎಷ್ಟು? (ಜಿಲ್ಲಾವಾರು ಹಾಗೂ ಯೋಜನವಾರು ವಿವರ ನೀಡುವುದು)

## ಥಾಮಸ್ ವರದಿಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೪೬ (೨೪೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಥಾಮಸ್ ವರದಿಯನ್ನು ರಾಜ್ಯದಲ್ಲಿ ಯಾವಾಗ ಜಾರಿ–ಗೊಳಿಸಲಾಗಿದೆ ;

(ಆ) ಅದರನ್ವಯ ಐ.ಟಿ.ಐ ಸಿಬ್ಬಂದಿಗೆ ನೀಡಿರುವ ಸೌಲಭ್ಯಗಳು ಯಾವುವು ; ಪ್ರಸ್ತಾವಿತ ಸೌಲಭ್ಯಗಳು ಯಾವುವು ?

## ಐ.ಟಿ.ಐ ಕಾಲೇಜುಗಳಿಗೆ ಅನುದಾನ ನೀಡುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೪೭ (೨೪೪) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಐ.ಟಿ.ಐ ಕಾಲೇಜುಗಳಿಗೆ ಅನುದಾನವನ್ನು ನೀಡುವ ಕುರಿತು ಸರ್ಕಾರದ ನೀತಿ ಏನು ;

(ಆ) ಹಾಲಿ ಅನುದಾನಿತ ಸಂಸ್ಥೆಗಳಲ್ಲಿ ಹೊಸದಾಗಿ ಆರಂಭಿಸಿರುವ ಕೋರ್ಸುಗಳಿಗೂ ಅನುದಾನ ನೀಡುವ ಕುರಿತು ಸರ್ಕಾರದ ಕ್ರಮ ಏನು ?

## SEP/TSP ಯೋಜನೆಯಡಿ ಕೊಳವೆ ಬಾವಿ ಕೊರೆಯುವ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)):–**

೧೪೮ (೨೫೪) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನರ ಜಮೀನಿಗೆ ಕೃಷಿ ಕಾರ್ಯ ಚಟುವಟಿಕೆ ಕೈಗೊಳ್ಳಲು ನೀರು ಒದಗಿಸುವ ಕೊಳವೆ ಬಾವಿ ಯೋಜನೆ ಜಾರಿಯಲ್ಲಿ ಇದೆಯೇ ;

(ಆ) ಜಾರಿಯಲ್ಲಿದ್ದರೆ ವೈಯಕ್ತಿಕ ಕೊಳವೆ ಬಾವಿ ಮತ್ತು ಸಾಮೂಹಿಕ ಕೊಳವೆ ಬಾವಿ ಕೊರೆಸಿ ವಿದ್ಯುತ್ ಸಂಪರ್ಕ ಒದಗಿಸಲು ಇಲಾಖೆ ನಿಗಧಿಪಡಿಸಿದ ಘಟಕ ವೆಚ್ಚ ಎಷ್ಟು ;

(ಇ) ಬರಪೀಡಿತ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ ಹಾಗೂ ತುಮಕೂರು ಜಿಲ್ಲೆಗಳಲ್ಲಿ ೨೦೧೫–೧೬ನೇ ಸಾಲಿನ SEP/TSP ಯೋಜನೆಯಡಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ? (ತಾಲ್ಲೂಕುವಾರು ಫಲಾನುಭವಿಗಳ ಹೆಸರು ಮತ್ತು ವಿಳಾಸ ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

## ಅರಣ್ಯ ಪ್ರದೇಶವನ್ನು ರಬ್ಬರ್ ಬೆಳೆಯಲು ನೀಡಿರುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೪೯ (೨೫೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅರಣ್ಯ ಪ್ರದೇಶವನ್ನು ಯಾವ ಯಾವ ಕಂಪನಿ/ವ್ಯಕ್ತಿ/ಸಂಸ್ಥೆಗೆ ರಬ್ಬರ್ ಬೆಳೆಯುವ ಸಲುವಾಗಿ ಗುತ್ತಿಗೆ/ಕ್ರಯಕ್ಕೆ ನೀಡಲಾಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ನೀಡಿದ್ದರೆ ಎಷ್ಟು ಎಕರೆ ಪ್ರದೇಶವನ್ನು ಎಷ್ಟು ಕಾಲಾವಧಿಗೆ ಮತ್ತು ಎಷ್ಟು ಕರಾರು ಮೊತ್ತಕ್ಕೆ ನೀಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ರಬ್ಬರ್ ಬೆಳೆಯಲು ಅರಣ್ಯ ಪ್ರದೇಶವನ್ನು ಗುತ್ತಿಗೆ/ಕ್ರಯಕ್ಕೆ ಪಡೆದ ಕಂಪನಿಗಳು ನಿಯಮಿತವಾಗಿ ಸರ್ಕಾರಕ್ಕೆ ಸಲ್ಲಿಸಬೇಕಾದ ಕರಾರು ಮೊಬಲಗನ್ನು ಸಂದಾಯ ಮಾಡಿವೆಯೆ ಅಥವಾ ಬಾಕಿ ಉಳಿಸಿಕೊಂಡಿವೆಯೇ; (ಕಂಪನಿ/ವ್ಯಕ್ತಿ/ಸಂಸ್ಥೆವಾರು ವಿವರ ನೀಡುವುದು)

(ಈ) ಕರಾರು ಪಡೆದ ಸಂಸ್ಥೆಗಳು ಸರ್ಕಾರದ ನಿಯಮಗಳನ್ನು ಪಾಲನೆ ಮಾಡುತ್ತಿವೆಯೇ ?

## ಡೀಮ್ಡ್ ಫಾರೆಸ್ಟ್ ಅರಣ್ಯ ಪ್ರದೇಶದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)):–**

೧೫೦ (೨೫೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡೀಮ್ಡ್ ಫಾರೆಸ್ಟ್ ಎಂದರೆ ಏನು ; (ವಿವರವಾದ ಮಾಹಿತಿಯನ್ನು ನೀಡುವುದು)

(ಆ) ರಾಜ್ಯದಲ್ಲಿ ಹಾಲಿ ಇರುವ ಡೀಮ್ಡ್ ಫಾರೆಸ್ಟ್‌ನ ವಿಸ್ತೀರ್ಣವೆಷ್ಟು ;

(ಇ) ರಾಜ್ಯಾದ್ಯಂತ ಅರಣ್ಯ ಭೂಮಿ ಸಾಗುವಳಿ ವಿವಾದಕ್ಕೆ ಕಾರಣವಾಗಿರುವ ಡೀಮ್ಡ್ ಫಾರೆಸ್ಟ್ ಗೊಂದಲಕ್ಕೆ ಶಾಶ್ವತ ಪರಿಹಾರ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಇದರ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯವು ೧೯೯೬ರ ಗೋಧವರ್ಮನ್ ಪ್ರಕರಣದಲ್ಲಿ ನೀಡಿರುವ ತೀರ್ಪಿನ ಮಾನದಂಡಗಳೇನು ?

## ಸೋಲಾರ್ ಪಾರ್ಕ್ ಸ್ಥಾಪಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)):–**

೧೫೧ (೨೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕಿನಲ್ಲಿ ಸೋಲಾರ್ ಪಾರ್ಕ್ ಸ್ಥಾಪಿಸುವ ಸಲುವಾಗಿ ಇಲ್ಲಿಯವರೆಗೆ ಎಷ್ಟು ಎಕರೆ ಜಮೀನನ್ನು ಯಾವ ಯಾವ ಕಂಪನಿಗಳು/ಸರ್ಕಾರ/ಇಲಾಖೆಗಳು ಭೂ ಸ್ವಾಧೀನಪಡಿಸಿಕೊಂಡಿವೆಯೇ ;

(ಆ) ಸ್ವಾಧೀನಪಡಿಸಿಕೊಂಡಿದ್ದರೆ ಜಮೀನಿನ ವಿಸ್ತೀರ್ಣ ಎಷ್ಟು ? (ತಾಲ್ಲೂಕುವಾರು, ಗ್ರಾಮ, ಸರ್ವೆ ನಂ, ಹೋಬಳಿ ವಿವರ ನೀಡುವುದು)

## ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯಲ್ಲಿನ ಕಾಮಗಾರಿಗಳ ಬಗ್ಗೆ

**ಶ್ರೀ ಗೋ. ಮಧುಸೂಧನ್ (ಪದವೀಧರರ ಕ್ಷೇತ್ರ):–**

೧೫೨ (೩೫೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು (೩) ವರ್ಷಗಳಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಎಷ್ಟು ; ಲೆಕ್ಕಶೀರ್ಷಿಕೆವಾರು ಕಾಮಗಾರಿಯ ಮೊತ್ತ; (ಒದಗಿಸುವುದು)

(ಆ) ಈ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; ಪೂರ್ಣಗೊಂಡ ಕಾಮಗಾರಿಗಳಿಗೆ ಮೊತ್ತ ಪಾವತಿಸಲಾಗಿದೆಯೇ ; ಇನ್ನೂ ಬಾಕಿ ಪಾವತಿಸಬೇಕಾಗಿರುವ ಕಾಮಗಾರಿಯ ಮೊತ್ತ ಎಷ್ಟು? (ಲೆಕ್ಕಶೀರ್ಷಿಕೆವಾರು ವಿವರ ನೀಡುವುದು)

## ರಾಜ್ಯದ ಬರಗಾಲದ ಹಿನ್ನೆಲೆಯಲ್ಲಿ ಗಂಜಿ ಕೇಂದ್ರ ಹಾಗೂ ಗೋಶಾಲೆಗಳ ಬಗ್ಗೆ

**ಶ್ರೀ ಗೋ. ಮಧುಸೂಧನ್ (ಪದವೀಧರರ ಕ್ಷೇತ್ರ):–**

೧೫೩ (೩೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಂದಿರುವ ಭೀಕರ ಬರಗಾಲದ ಹಿನ್ನೆಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಗಂಜಿ ಕೇಂದ್ರಗಳನ್ನು ತೆರೆಯಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಪಶುಗಳಿಗೆ ಮೇವು ಇಲ್ಲದ ಹಿನ್ನೆಲೆಯಲ್ಲಿ ಎಷ್ಟು ಗೋಶಾಲೆಗಳನ್ನು ಸರ್ಕಾರದಿಂದ ಸ್ಥಾಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು) ಇವುಗಳಿಗೆ ಸರ್ಕಾರದಿಂದ ಪ್ರತಿ ತಿಂಗಳು ಖರ್ಚು ಮಾಡುತ್ತಿರುವ ಹಣ ಎಷ್ಟು: (ಜಿಲ್ಲಾವಾರು ವಿವರ ನೀಡುವುದು)

(ಇ) ಖಾಸಗಿಯಾಗಿ ಇಂತಹ ಗೋಶಾಲೆಗಳನ್ನು ನಡೆಸುತ್ತಿರುವವರಿಗೆ ಸರ್ಕಾರ ಈವರೆವಿಗೆ ಆರ್ಥಿಕ ನೆರವು ನೀಡುತ್ತಿದೆಯೇ; (ವಿವರ ನೀಡುವುದು)

(ಈ) ಖಾಸಗಿಯಾಗಿ ಗೋಶಾಲೆಗಳನ್ನು ನಡೆಸುತ್ತಿರುವವರಿಗೆ ಸರ್ಕಾರದಿಂದ ನೀಡಲಾಗುವ ಆರ್ಥಿಕ ನೆರವನ್ನು ಪಡೆಯಲು ಇರಬೇಕಾದ ಮಾನದಂಡಗಳೇನು ; (ವಿವರ ನೀಡುವುದು)

(ಉ) ಯುವ ಪೀಳಿಗೆಯನ್ನು ಡೈರಿ farming ಕಡೆಗೆ ಆಕರ್ಷಿಸಲು ವಿಶೇಷವಾದ ಸವಲತ್ತುಗಳನ್ನು ಒದಗಿಸಲು ಸರ್ಕಾರ ಯಾವ ಚಿಂತನೆಗಳನ್ನು ಮಾಡಿದೆ ;

(ಊ) ಕಲಬುರಗಿ ಜಿಲೆಯಲ್ಲಿ ಡಗ್ಗಾವಿ ಕುಟುಂಬವು ನಡೆಸುತ್ತಿರುವ 'ನಂದಿವನ' ಎಂಬ ಗೋಶಾಲೆಯಲ್ಲಿ ಎಷ್ಟು ಎತ್ತುಗಳಿವೆ; ಈ ಗೋಶಾಲೆಗೆ ಸರ್ಕಾರ ಯಾವ ಯಾವ ಸಹಾಯ ನೀಡಿದೆ ? (ವಿವರ ನೀಡುವುದು)

## ವನ್ಯ ಪ್ರಾಣಿಗಳು ಜನವಸತಿ ಪ್ರದೇಶಗಳಿಗೆ ಪ್ರವೇಶಿಸುತ್ತಿರುವ ಬಗ್ಗೆ

**ಶ್ರೀ ಗೋ. ಮಧುಸೂಧನ್ (ಪದವೀಧರರ ಕ್ಷೇತ್ರ):–**

೧೫೪ (೩೫೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು (೩) ವರ್ಷಗಳಲ್ಲಿ ಆನೆ, ಹುಲಿ, ಚಿರತೆ, ತೋಳ, ನರಿ, ಕರಡಿ, ಮುಂತಾದ ವನ್ಯ ಪ್ರಾಣಿಗಳು ಜನವಸತಿ ಪ್ರದೇಶಗಳಿಗೆ ಪ್ರವೇಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಪ್ರಕರಣವಾರು ವಿವರ ನೀಡುವುದು)

(ಆ) ಇಂತಹ ವನ್ಯಪ್ರಾಣಿಗಳು ಆಕ್ರಮಣಕ್ಕೆ ತುತ್ತಾಗಿ, ಗಾಯಗೊಂಡಿರುವ ಮತ್ತು ಮರಣ ಹೊಂದಿರುವ ಪ್ರಕರಣಗಳ ವಿವರ ನೀಡುವುದು:

(ಇ) ಕಳೆದ ಮೂರು (೩) ವರ್ಷಗಳಲ್ಲಿ ಈ ವನ್ಯ ಪ್ರಾಣಿಗಳಿಂದಾದ ಬೆಳೆಹಾನಿ, ಪರಿಹಾರ ಮತ್ತು ಗಾಯಗೊಂಡವರಿಗೆ ಮತ್ತು ಮರಣ ಹೊಂದಿದವರಿಗೆ ಪರಿಹಾರ ನೀಡಲಾಗಿದೆಯೇ ; (ವಿವರ ನೀಡುವುದು)

(ಈ) ರೈಲ್ವೆ ಕಂಬಿ ಬೇಲಿಯನ್ನು ರಾಜ್ಯದಲ್ಲಿ ಎಲ್ಲೆಲ್ಲಿ ಅಳವಡಿಸಲಾಗಿದೆ; (ವಿವರ ನೀಡುವುದು) ಎಷ್ಟು ಉದ್ದ ಅಳವಡಿಸಲಾಗಿದೆ ; ಇದಕ್ಕಾಗಿ ತಗುಲಿದ ವೆಚ್ಚ ಎಷ್ಟು ?

## ಪಾವಗಡ ತಾಲ್ಲೂಕಿನ ಹಳ್ಳಿಗಳಿಗೆ ಕೃಷ್ಣಾ ನದಿ ನೀರನ್ನು ಕುಡಿಯಲು ನೀಡುವ ಬಗ್ಗೆ

**ಶ್ರೀ ಕಾಂತರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫ (೧೫೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗಡಿ ಭಾಗವಾದ ಪಾವಗಡ ತಾಲ್ಲೂಕಿನ ಕೆಲವು ಹಳ್ಳಿಗಳ ಮೂಲಕ ಕೃಷ್ಣಾ ನದಿ ನೀರನ್ನು ಪೈಪ್ ಲೈನ್ ಮೂಲಕ ಆಂಧ್ರಪ್ರದೇಶಕ್ಕೆ ತೆಗೆದುಕೊಂಡು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪಾವಗಡ ಮತ್ತು ಅಕ್ಕ ಪಕ್ಕದ ತಾಲ್ಲೂಕಿನ ಎಷ್ಟು ಹಳ್ಳಿಗಳ ಮೂಲಕ ಕೃಷ್ಣಾ ನದಿ ನೀರನ್ನು ಆಂಧ್ರಪ್ರದೇಶಕ್ಕೆ ತೆಗೆದುಕೊಂಡು ಹೋಗಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಪಾವಗಡ ತಾಲ್ಲೂಕಿನಾದ್ಯಂತ ಕುಡಿಯುವ ನೀರಿಗೆ ತುಂಬಾ ತೊಂದರೆ ಇರುವ ಕಾರಣ ಈ ತಾಲ್ಲೂಕಿನ ಮೂಲಕ ನೀರಿನ ಪೈಪ್ ಲೈನ್ ಹಾದುಹೋಗಿರುವ ಹಳ್ಳಿಗಳಿಗೆ ಇದೇ ಕೃಷ್ಣಾ ನದಿ ನೀರನ್ನು ಕುಡಿಯುವ ಸಲುವಾಗಿ ಕೊಡಲು ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳುವುದೇ ? (ವಿವರ ನೀಡುವುದು)

## ಬೆಳೆ ಪರಿಹಾರ ನೀಡುವ ಬಗ್ಗೆ

**ಶ್ರೀ ಕಾಂತರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೬ (೧೫೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟು ಜನ ರೈತರು ಮಳೆಹಾನಿಯಿಂದ ಅಥವಾ ಮಳೆಬಾರದೆ ಇರುವುದರಿಂದ ಬೆಳೆದ ಬೆಳೆಯನ್ನು ಕಳೆದುಕೊಂಡಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೆಳೆಹಾನಿಗೊಳಗಾದ ರೈತರಿಗೆ ಇದುವರೆಗೂ ವಿತರಣೆ ಮಾಡಿರುವ ಪರಿಹಾರದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೆಳೆಹಾನಿಗೊಳಗಾದ ರೈತರಿಗೆ ಸಮರ್ಪಕವಾಗಿ ಮತ್ತು ವೈಜ್ಞಾನಿಕವಾಗಿ ಪರಿಹಾರ ನೀಡಲಾಗಿದೆಯೇ ; ಪರಿಹಾರ ನೀಡಲು ಅನುಸರಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಬೆಳೆಹಾನಿಗೊಳಗಾದ ರೈತರಿಗೆ ಬಾಕಿ ಇರುವ ಪರಿಹಾರವನ್ನು ಆದಷ್ಟು ಬೇಗ ವಿತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಷ್ಟು ದಿನಗಳಲ್ಲಿ ಬಾಕಿ ಇರುವ ಪರಿಹಾರವನ್ನು ಒದಗಿಸಲಾಗುವುದು ?

## ಬೀದರ್ ಜಿಲ್ಲೆಯ ಕ್ರೀಡಾಂಗಣಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೭ (೧೭೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಇರುವ ಕ್ರೀಡಾ ಸಂಕೀರ್ಣಗಳ ಸಂಖ್ಯೆ ಎಷ್ಟು ;

(ಆ) ಈ ಜಿಲ್ಲೆಗಳಲ್ಲಿ ಕ್ರೀಡಾಪಟುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಕ್ರೀಡಾ ಸಂಕೀರ್ಣಗಳ ಮೂಲಭೂತ ಸೌಕರ್ಯಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ನಾಡ ಕಚೇರಿಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೮ (೧೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಇರುವ ನಾಡ ಕಚೇರಿಗಳ ಸಂಖ್ಯೆ ಎಷ್ಟು ;

(ಆ) ಈ ನಾಡ ಕಚೇರಿಗಳು ಸರಿಯಾಗಿ ಕಾರ್ಯನಿರ್ವಹಿಸದೆ ಇರಲು ಕಾರಣಗಳೇನು ;

(ಇ) ಈ ನಾಡ ಕಚೇರಿಗಳಿಗೆ ಸಿಬ್ಬಂದಿ ಮತ್ತು ಮೂಲಭೂತ ಸೌಕರ್ಯಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖಾ ವ್ಯಾಪ್ತಿಯ ಅಭಿವೃದ್ಧಿ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೧೫೯ (೧೮೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖಾ ವ್ಯಾಪ್ತಿಯಲ್ಲಿ ಹಮ್ಮಿಕೊಂಡಿರುವ ನೂತನ ಯೋಜನೆಗಳಾವುವು ; ಯೋಜನಾ ವಿವರಗಳೇನು ;

(ಆ) ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಪಾರಂಪರಿಕ ಕ್ರೀಡೆಗಳನ್ನು ಮುಂದುವರೆಸಲು ಹಾಗೂ ಹಿಂದಿನಿಂದಲೂ ಇದ್ದ ಕ್ರೀಡಾ ಮೈದಾನಗಳನ್ನು ಉಳಿಸಿ ಅಭಿವೃದ್ಧಿಪಡಿಸಲು ಇಲಾಖೆಯ ಕಾರ್ಯಕ್ರಮಗಳೇನು ;

(ಇ) ಜಿಲ್ಲೆಯಲ್ಲಿ ವಿವಿಧ ಕ್ರೀಡಾ ಕ್ಷೇತ್ರ ಎಷ್ಟು ಜನ ಗ್ರಾಮೀಣ ಪ್ರತಿಭೆಗಳನ್ನು ಗುರುತಿಸಲಾಗಿದೆ ;

(ಈ) ಹಾಗಿದ್ದಲ್ಲಿ ತರಬೇತಿ ಹಾಗೂ ಇತರೆ ಪ್ರೋತ್ಸಾಹ ಕಾರ್ಯ–ಕ್ರಮಗಳನ್ನು ನೀಡಲಾಗುತ್ತಿದೆಯೇ ?

## ಐ.ಟಿ.ಐ. ಕಾಲೇಜಿನಲ್ಲಿ /ಅವ್ಯವಹಾರ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦ (೨೨೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿರುವ ಐ.ಟಿ.ಐ. ಕಾಲೇಜಿನ ಭಾಗಗಳಲ್ಲಿ ಕಳೆದ ೧೦ ವರ್ಷಗಳಿಂದ ಖರೀದಿಸಿರುವ ಸಲಕರಣೆಗಳಲ್ಲಿ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಐ.ಟಿ.ಐ. ಕಾಲೇಜಿನ ವಿದ್ಯಾರ್ಥಿಗಳಿಗೆ ಅಗತ್ಯವಾಗಿ ಬೇಕಾಗಿರುವ (ಲ್ಯಾಬ್) ಪ್ರಾಕ್ಟಿಕಲ್ ಕುರಿತಾದ ಸಲಕರಣೆಗಳನ್ನು ಕಳೆದ ೧೦ ವರ್ಷಗಳಲ್ಲಿ ನಿಯಮದಂತೆ ಖರೀದಿಸಿರುತ್ತಾರೆಯೇ ; ಯಾವ ಯಾವ ಏಜೆನ್ಸಿ ಮುಖಾಂತರ ಖರೀದಿಸಿರುತ್ತಾರೆ ; (ಏಜೆನ್ಸಿ ನೀಡಿರುವ ದರ ಐ.ಟಿ.ಐ. ಹಾಗೂ ಖರೀದಿಸಿದ ರಶೀದಿಯ ಸಮೇತ ವಿವರ ನೀಡುವುದು) ಸದರಿ ಖರೀದಿಯಲ್ಲಿ ದೊಡ್ಡ ಪ್ರಮಾಣದ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ, (ಮಾಹಿತಿಯನ್ನು ಪ್ರತ್ಯೇಕವಾಗಿ, ವರ್ಷವಾರು ನೀಡುವುದು)

## ಅರಣ್ಯ ಗೃಹ ವಸತಿಗಳು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೧ (೨೨೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆನರಾ ವೃತ್ತದ ಹಳಿಯಾಳ ವಿಭಾಗದ ಹಳಿಯಾಳ ವಲಯದಲ್ಲಿ ಎಷ್ಟು ಅರಣ್ಯ ವಸತಿ ಗೃಹಗಳು ಇರುತ್ತವೆ ; (ಭಾಗವಾರು / ವಲಯವಾರು ವಿವರ ನೀಡುವುದು)

(ಆ) ಸದರಿ ವಸತಿ ಗೃಹಗಳಿಗೆ ಕಳೆದ ೨೦೧೩ ರಿಂದ ೨೦೧೫ ರವರೆಗೆ ವಿವಿಧ ಶೀರ್ಷಿಕೆಯಲ್ಲಿ ಬಂದಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಇ) ಸದರಿ ಅನುದಾನದಲ್ಲಿ ೨೦೧೪-೧೫ ಹಾಗೂ ೨೦೧೫-೨೦೧೬ರ ವರೆಗಿನ ಅವಧಿಯಲ್ಲಿ ಯಾವ ಯಾವ ಕಟ್ಟಡಗಳಿಗೆ ರಿಪೇರಿ ಹಾಗೂ ಸುಧಾರಣಾ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ ; (ಪ್ರತಿಯೊಂದು ಕಟ್ಟಡದ ಅಂದಾಜು ಪತ್ರಿಕೆಯ ಪ್ರತಿಯೊಂದಿಗೆ ಪರಿಶೀಲಿಸಲು ಪ್ರತ್ಯೇಕ ವಿವರ ನೀಡುವುದು)

(ಈ) ಬಂದಿರುವ ಅನುದಾನದಲ್ಲಿ ಕೆಲವು ಕಟ್ಟಡಗಳ ರಿಪೇರಿ ಮಾಡದೇ ಅಂದಾಜು ಪತ್ರಿಕೆ ಮಂಜೂರು ಮಾಡಿಸಿಕೊಂಡು ಹಣ ಬಿಡುಗಡೆ ಮಾಡಿಕೊಂಡಿರುವ ಬಗ್ಗೆ ದೂರುಗಳು ಬಂದಿರುವುದು ನಿಜವೇ? (ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 0278/1000 ಪ್ರತಿಗಳು/24-02-2016